ಸಂಪುಟ 01 | ಸಂಚಿಕೆ 162 ಭಾನುವಾರ 16 ಆಗಸ್ಟ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) Atal Bihari Vajpayee Death Anniversary
ಅಟಲ್ ಬಿಹಾರಿ ವಾಜಪೇಯಿ ಪುಣ್ಯತಿಥಿ – ಭಾರತದ ಮಾಜಿ ಪ್ರಧಾನಮಂತ್ರಿ ಅಟಲ್ ಬಿಹಾರಿ ವಾಜಪೇಯಿ ಅವರು 2018ರ ಆಗಸ್ಟ್ 16ರಂದು ನಿಧನರಾದರು. ಅವರ ಸ್ಮರಣಾರ್ಥ ಈ ದಿನವನ್ನು ಗೌರವದಿಂದ ಆಚ–ರಿಸಲಾಗುತ್ತದೆ.

2)National Airborne Day (ರಾಷ್ಟ್ರೀಯ ಏರ್‌ಬೋರ್ನ್ ದಿನ) – ಅಮೆರಿಕದ ಸೇನೆಯ ಪ್ಯಾರಾಟ್ರೂಪರ್‌ಗಳು ಮತ್ತು ಗ್ಲೈಡರ್ ಪಡೆಗಳ ಸೇವೆ ಹಾಗೂ ಕೊಡುಗೆಯನ್ನು ಗೌರವಿಸುವ ದಿನ.

## ಸುಭಾಷಿತ

ನಡೆದಷ್ಟೂ ದಾರಿಯಿದೆ, ಪಡೆದಷ್ಟೂ ಭಾಗ್ಯವಿದೆ ಎಂಬುದೇ ಜಗತ್ತು ನಮಗೆ ಕೊಡುವ ಸಂದೇಶ.

ವಿ.ಕೃ. ಗೋಕಾಕ್

# ಲೋಟಸ್ ಕಾಲೇಜಿನಲ್ಲಿ ವಿಜೃಂಭಣೆಯಿಂದ ಸ್ವಾತಂತ್ರ್ಯ ದಿನಾಚರಣೆ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ:** ತಾಳಿಕೋಟಿಯ ಲೋಟಸ್ ಕಾಲೇಜ್ ಆಫ್ ಫಾರ್ಮಸಿ ಹಾಗೂ ಸ್ಕೂಲ್ ಆಫ್ ನರ್ಸಿಂಗ್‌ನಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಸಂಭ್ರಮ, ಶಿಸ್ತು ಹಾಗೂ ಗಾಢ ದೇಶಭಕ್ತಿಯ ವಾತಾವರಣದಲ್ಲಿ ವಿಜೃಂಭಣೆಯಿಂದ ಆಚರಿಸಲಾಯಿತು. ಬೆಳಗ್ಗೆಯಿಂದಲೇ ಕಾಲೇಜು ಆವರಣದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿದ್ದು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ದೇಶಭಕ್ತಿಯ ಉತ್ಸಾಹದಿಂದ ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

ಕಾರ್ಯಕ್ರಮದ ಅಂಗವಾಗಿ ಕಾಲೇಜಿನ ಆಡಳಿತಾಧಿಕಾರಿ ಜನಾಬ್ ಮುಜಾಹಿದ್ ನಮಾಜ್‌ಕಟ್ಟಿ ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿದರು. ಧ್ವಜಾರೋಹಣದ ಸಂದರ್ಭದಲ್ಲಿ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಗೌರವಪೂರ್ವಕವಾಗಿ ಎದ್ದು ನಿಂತು ರಾಷ್ಟ್ರಧ್ವಜಕ್ಕೆ ಗೌರವ ಸಲ್ಲಿಸಿದರು. ನಂತರ ರಾಷ್ಟ್ರಗೀತೆಯನ್ನು ಸಾಮೂಹಿಕವಾಗಿ ಹಾಡಿ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರನ್ನು ಸ್ಮರಿಸಲಾಯಿತು.

ಕಾರ್ಯಕ್ರಮದಲ್ಲಿ ಸನ್ಮಾರ್ಗ



ಟ್ರಸ್ಟ್, ತಾಳಿಕೋಟಿಯ ಅಧ್ಯಕ್ಷರಾದ ಜನಾಬ್ ಅಬ್ದುಲ್ ಕರೀಂ ಸಾಬ್ ಬಾಗ್ವಾನ್ ಅವರು ಮುಖ್ಯ ಅತಿಥಿಯಾಗಿ ಉಪಸ್ಥಿತರಿದ್ದರು. ಅವರು ಸ್ವಾತಂತ್ರ್ಯ ದಿನಾಚರಣೆಯ ಮಹತ್ವವನ್ನು ವಿವರಿಸುತ್ತಾ, ದೇಶದ ಸ್ವಾತಂತ್ರ್ಯವು ಅನೇಕ ಮಹನೀಯರ ತ್ಯಾಗ, ಬಲಿದಾನ ಮತ್ತು ಹೋರಾಟದ ಫಲವಾಗಿದೆ. ಆದ್ದರಿಂದ ಸ್ವಾತಂತ್ರ್ಯದ ಮೌಲ್ಯವನ್ನು ಅರಿತು, ದೇಶದ ಏಕತೆ, ಶಾಂತಿ ಮತ್ತು ಸೌಹಾರ್ದತೆಯನ್ನು ಕಾಪಾಡುವುದು ಪ್ರತಿಯೊಬ್ಬ ನಾಗ–ರಿಕನ ಕರ್ತವ್ಯವಾಗಿದೆ ಎಂದು ಹೇಳಿದರು.

ಯುವಜನರು ದೇಶದ ಭವಿಷ್ಯವಾಗಿದ್ದು, ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ, ಶಿಸ್ತು, ಪ್ರಾಮಾಣಿಕತೆ, ಸೇವಾ ಮನೋಭಾವ ಮತ್ತು ಸಾಮಾಜಿ–ಕ ಜವಾಬ್ದಾರಿಯನ್ನು ಬೆಳೆಸಿಕೊಳ್ಳಬೇಕು. ತಮ್ಮ ಪ್ರತಿಭೆ ಹಾಗೂ ಜ್ಞಾನವನ್ನು ಕೇವಲ ವೈಯಕ್ತಿಕ ಅಭಿವೃದ್ಧಿಗೆ ಸೀಮಿತಗೊಳಿಸದೆ, ಸಮಾಜ ಮತ್ತು ರಾಷ್ಟ್ರದ ಅಭಿವೃದ್ಧಿಗೂ ಬಳಸಬೇಕು ಎಂದು ಅವರು ಕರೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜನಾಬ್ ಮುಜಾಹಿದ್ ನಮಾಜ್‌ಕಟ್ಟಿ ಅವರು, ಸ್ವಾತಂತ್ರ್ಯ

2ನೇ ಪುಟಕ್ಕೆ

## ದೋಟಿಹಾಳ ಗ್ರಾಮ ಪಂಚಾಯಿತಿಯಲ್ಲಿ 80ನೇ ಸ್ವಾತಂತ್ರ್ಯೋತ್ಸವ ಆಚರಣೆ

ನೈಜ್ಯ ದೆಸೆ ನ್ಯೂಸ್

**ದೋಟಿಹಾಳ:** 80ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ದೋಟಿಹಾಳ ಗ್ರಾಮ ಪಂಚಾಯಿತಿ ಆವರಣದಲ್ಲಿ ಶನಿವಾರ ಸಂಭ್ರಮದಿಂದ ಸ್ವಾತಂತ್ರ್ಯೋತ್ಸವ ಆಚರಿಸಲಾಯಿತು.



ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (PDO) ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿ, ಧ್ವಜಕ್ಕೆ ಗೌರವ ಸಲ್ಲಿಸಿದರು. ಬಳಿಕ ನೆರೆದಿದ್ದವರು ರಾಷ್ಟ್ರಗೀತೆ ಹಾಡಿ ದೇಶಭಕ್ತಿಯ ಭಾವನೆ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸಿಬ್ಬಂದಿ, ಮಾಜಿ ಅಧ್ಯಕ್ಷರು, ಹಾಲಿ ಹಾಗೂ ಮಾಜಿ ಸದಸ್ಯರು, ವಿವಿಧ ಸಂಘಟನೆಗಳ ಪದಾಧಿಕಾ–ರಿಗಳು, ಶಿಕ್ಷಕರು, ಗ್ರಾಮಸ್ಥರು ಮತ್ತು ಮುದ್ದು ಮಕ್ಕಳು ಭಾಗವಹಿಸಿದ್ದರು. ಸ್ವಾತಂತ್ರ್ಯೋತ್ಸವದ ಅಂಗವಾಗಿ ಗ್ರಾಮದಲ್ಲಿ ದೇಶಭಕ್ತಿ ಹಾಗೂ ಸಂಭ್ರಮದ ವಾತಾವರಣ ಕಂಡುಬಂದಿತು.

# ಕವಿತಾಳ– ವಿವಿಧೆಡೆ ಸಂಭ್ರಮದ ದ್ವಜಾರೋಹಣ

ನೈಜ್ಯ ದೆಸೆ ನ್ಯೂಸ್

**ಕವಿತಾಳ:** ಪಟತಟಣದಲ್ಲಿ ಇಂದು ಅತ್ಯಂತ ಸಂಭ್ರಮ ಸಡಗರದಿಂದ 80ನೇ ಸ್ವಾತಂತ್ರೋತ್ಸವ ಆಚರಿಸಲಾಯಿತು. ಪೊಲೀಸ್ ಠಾಣೆಯಲ್ಲಿ ಪಿಎಸ್‌ಐ ಅಜ್ಮೀರ್ ಪಾಷಾ ದ್ವಜಾರೋಹಣ ನೆರವೇರಿಸಿದರು. ನಂತರ ಮಾತನಾಡಿದ ಅವರು ಹಲವಾರು ಮಹನೀಯರ ತ್ಯಾಗ ಬಲಿಧಾನದಿಂದಾಗಿ ನಮಗೆ ಸ್ವಾತಂತ್ರ್ಯ ದೊರಕಿದ್ದು ನಾವುಗಳು ಅದನ್ನು ಅರಿತು ದೇಶದ ಏಳಿಗೆಗಾಗಿ ಶ್ರಮಿಸುವ ಮುಲಕ ಸಮಾಜದಲ್ಲಿ ಶಾಂತಿ–ಸುವ್ಯವಸ್ಥೆಯನ್ನು ಕಾಪಾಡುವ ಮೂಲಕ ಆದರ್ಶಪ್ರಾಯವಾದ ಜೀವನ ನೆಡಸಿದಾಗ ಮಾತ್ರ ಮಹನಿಯರ ತ್ಯಾಗಕ್ಕೆ ಬೆಲೆ ಸಿಕ್ಕಂತಾಗುತ್ತದೆ ಎಂದು ಅಭಿಪ್ರಾಯ ಪಟ್ಟರು.









ಎಎಸ್ಐ ಮೌನೇಶ ಸೇರಿದಂತೆ ಸಿಬ್ಬಂದಿಗಳು ಮತ್ತು ನಾಗರೀಕರು ಉಪಸ್ಥಿತರಿದ್ದರು. ಪಟ್ಟಣ ಪಂಚಾಯತಿಯಲ್ಲಿ ಅಧ್ಯಕ್ಷೆ ರಾಜೇಶ್ವರಿ ತಿಪ್ಪಯ್ಯಸ್ವಾಮಿ ದ್ವಜಾರೋಹಣ ಮಾಡಿದರು, ಉಪಾಧ್ಯಕ್ಷೆ ಯಲಿಜಾ ಓವಣ್ಣ, ಮುಖ್ಯಾಧಿಕಾರಿ ಜೆಸ್‌ಪಾಲ್ ಸಿಂಗ್ ಮತ್ತು ಜಿಲ್ಲಾ ಪಂಚಾಯತಿ ಮಾಜಿ ಸದಸ್ಯ ಕಿರಿಲಿಂಗಪ್ಪ ಸೇರಿದಮಂತೆ ಪಟ್ಟಣ ಪಂಚಾಯತಿಯ ಹಾಲಿ ಮತ್ತು ಮಾಜಿ ಸದಸ್ಯರು, ವಿವಿಧ ಸಂಘಟನೆಗಳ ಮುಖಂಡರು, ಸಿಬ್ಬಂದಿಗಳು ಉಪಸ್ಥಿತರಿದ್ದರು.


ಅಗ್ನಿವೀರ ಸೇನೆಗೆ ಆಯ್ಕೆಯಾದ ಪಟ್ಟಣದ ಶ್ರೀನಿವಾಸ ಯಲ್ಲಪ್ಪ ಕಟ್ಟಿಮನಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಬಾಲಕೀಯರ ಸರ್ಕಾರಿ ಪ್ರೌಢಶಾಲೆ, ಕರ್ನಾಟಕ ಪಬ್ಲಿಕ್ ಶಾಲೆ ಪ್ರೌಢಶಾಲಾ ವಿಭಾಗ, ಸರ್ಕಾರಿ ಪದವಿ ಪೂರ್ವ ಕಾಲೇಜ್, ಸರಕಾರಿ ಹಿರಿಯ ಪ್ರಾಥಮಿಕ ಕನ್ಯಾಶಾಲೆ, ಎಸ್‌ಬಿಐ ಬ್ಯಾಂಕ್ ಸೇ–ರಿದಂತೆ ವಿವಿಧ ಸಹಕಾರಿ ಸಂಘಗಳು,ಖಾಸಗಿ ಶಾಲಾ ಸಂಸ್ಥೆಗಳಲ್ಲಿ ಸಂಭ್ರಮದಿಂದ 80ನೇ ಸ್ವಾತಂತ್ರ್ಯ ದಿನವನ್ನು ಆಚರಿಸಲಾಯಿತು.

## ಶಿಸ್ತು ನಿಷ್ಠೆಯಿಂದ ವಿದ್ಯಾರ್ಥಿಗಳು ಆದರ್ಶ ನಾಯಕರಾಗಿ : ಮಹಾಂತೇಶ್ ಓಲೇಕಾರ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ವಿದ್ಯಾರ್ಥಿಗಳು ಶಿಸ್ತು ನಿಷ್ಠೆಯಿಂದ ಶ್ರದ್ದೆಯಿಂದ ಪ್ರೀತಿಯಿಂದ ಹಿರಿಯರು ಹೇಳಿದ ನುಡಿಗಳನ್ನು ಆಲಿಸಿಕೊಂಡು ಆದರ್ಶ ನಾಯಕರ ನುಡಿಗಳನ್ನು ತಿಳಿದು ಕೊಂಡು ವಿದ್ಯಾರ್ಥಿಗಳು ಕೂಡ ಮುಂದೆ ಆದರ್ಶ ವ್ಯಕಿಗಳಾಗಿ ಎಂದು ಹೇಳಿದರು.**

ಪಟ್ಟಣದ ಶ್ರೀ ವೆಂಕಟೇಶ್ವರ ಶಿಕ್ಷಣ ಸಂಸ್ಥೆಯಲ್ಲಿ 80 ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಂಸ್ಥೆಯ ಅಧ್ಯಕ್ಷರಾದ ಮಹಾಂತೇಶ್ ಓಲೇಕಾರ ಧ್ವಜಾರೋಹಣ ನೆರವೇರಿಸಿ ಮಾತನಾಡಿ ಇಂದು 80 ನೇ ಸ್ವಾತಂತ್ರ್ಯ ದಿನಾಚರಣೆಯನ್ನು ನಾಡೀನಾದ್ಯಂತ ಆಚರಿಸಲಾಯಿತು.ಅನೇಕ ಮಹನೀಯರ ತ್ಯಾಗ ಬಲಿದಾನದ ಫಲವಾಗಿ ನಮ್ಮ ದೇಶಕ್ಕೆ ಸ್ವಾತಂತ್ರ್ಯ ದೊರಕಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಪದವಿ ಕಾಲೇಜಿನ ಪ್ರಾಂಶುಪಾಲ ಆಂಜನೇಯ ನಸಲಾಪುರ ಮಾತನಾಡಿ ದೇಶ ನಮಗೆ ಏನು ಕೊಟ್ಟಿದೆ ಅನ್ನುದಕ್ಕಿಂತ ದೇಶಕ್ಕಾಗಿ ನಾವೇನು ಮಾಡಿದ್ದೇವೆ ಎನ್ನುವುದನ್ನು ಪ್ರತಿಯಯೊಬ್ಬ ವಿದ್ಯಾರ್ಥಿಗಳು ಮನವರಿಕೆ ಮಾಡಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ



ಕಿವಿ ಮಾತು ಹೇಳಿದರು. ಪ್ರತಿಯೊಬ್ಬ ವಿದ್ಯಾರ್ಥಿಗಳು ಉತ್ತಮವಾದ ಶಿಕ್ಷಣವನ್ನು ಪಡೆದುಕೊಂಡು ಕಲಿಸಿದ ಗುರುಗಳಿಗೆ ಹಾಗೂ ತಂದೆ ತಾಯಿಗಳಿಗೆ ಗೌರವನ್ನು ಕೊಡಬೇಕು ಎಂದುಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅಥಿತಿಯಾಗಿ ಆಗಮಿಸಿದ ಖಾಸಗಿ ಶಾಲೆಗಳ ಧೈಹಿಕ ಶಿಕ್ಷಕರ ಸಂಘದ ತಾಲೂಕಾದ್ಯಾಕ್ಷರಾದ ರಂಗರಾವ್ ಕುಲಕರ್ಣಿ ಮಾತನಾಡಿ ಪ್ರತಿಯೊಬ್ಬ ವಿದ್ಯಾರ್ಥಿಗಳು ಶ್ರದ್ದೆ ಶಿಸ್ತನ್ನು ಬೆಳಸಿಕೊಂಡು ಉತ್ತಮವಾದ ಶಿಕ್ಷಣ ಪಡೆದುಕೊಂಡು ಸಮಾಜದಲ್ಲಿ ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಿ ಎಂದು ಹೇಳಿದರು ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯದರ್ಶಿ ಡಾ ವೆಂಕಟೇಶ್ ಓಲೇಕಾರ್, ಎಸ್ ಎಮ್ ವಿ ಓಲೇಕಾರ್ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಶ್ರೀದೇವಿ ಡಾ. ವೆಂಕಟೇಶ್ ಓಲೇಕಾರ್ ಪ್ರೌಢ ಶಾಲೆಯ ಆಡಳಿತಾಧಿಕಾ–ರಿಗಳು ಶಂಕರಪ್ಪ ನಕ್ಕುಂದಿ, ಪ್ರೌಢ ಶಾಲೆಯ ಮುಖ್ಯಗುರು ಚಂದ್ರಶೇಖರ ಪಾಟೀಲ್ ಉಪನ್ಯಾಸಕರಾದ ಡಾ. ಹುಲಿಯಪ್ಪ ದುಮತಿ ಚಂದ್ರಶೇಖರ ಎಚ್ ಶರಣಬಸವ ಕರಡಿಗುಡ್ಡ ಅಂಬಣ್ಣ ನಾಯಕ ನಾಗರಾಜ ಚಿಮಲಾಪುರ ನೀಲಮ್ಮ ಸ್ವಾತಿ ಅನುಸೂಯ ಸಂತೋಷ ಪದವಿ ಪದವಿ ಪೂರ್ವ ಹಾಗೂ ಪ್ರೌಢ ಶಾಲೆಯ ವಿದ್ಯಾರ್ಥಿಗಳು ಉಪಸ್ಥಿತ–ರಿದ್ದರು.ಕಾರ್ಯಕ್ರಮ ವನ್ನು ಶಿಕ್ಷಕಿಯಾದ ಸುಮಂಗಳ ನಿರೂಪಿಸಿದರು ಅಮರಮ್ಮ ಸ್ವಾಗತಿಸಿದರು ರೂಬಿಯ ವಂದಿಸಿದರು.

## 80ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಮುಧೋಳದ ಶಿಕ್ಷಕರಿಗೆ ಸನ್ಮಾನ

ನೈಜ್ಯ ದೆಸೆ ನ್ಯೂಸ್

**ಮುಧೋಳ: 80ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ತಾಲೂಕಿನಲ್ಲಿ ಸಾಧನೆ ಮಾಡಿದ ಶಿಕ್ಷಕರನ್ನು ಸನ್ಮಾನಿಸಿ ಗೌರವಿಸಲಾಯಿತು.**

ಕಳೆದ 2025–26ನೇ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ 100% ಫಲಿತಾಂಶ ಸಾಧಿಸಿ ತಾಲೂಕಿಗೆ ಕೀರ್ತಿ ತಂದ ಮುಧೋಳ ಅಲ್ಪಸಂಖ್ಯಾತ ಇಲಾಖೆಯ ಮೌಲಾನಾ ಆಜಾದ್ ಇಂಗ್ಲಿಷ್ ಮಿಡಿಯಮ್ ಮಾಡೆಲ್ ಸ್ಕೂಲ ಮುಖ್ಯೋಪಾಧ್ಯಾಯರಾದ ರಾಯಪ್ಪಾ ಗಾಣಗೇರ ಹಾಗೂ ಸಿ ಸಿಬ್ಬಂದಿ ವರ್ಗದವರನ್ನು

ತಾಲೂಕಾ ಆಡಳಿತ ಹಾಗೂ ತಾಲೂಕಾ



ಪಂಚಾಯತ್ ವತಿಯಿಂದ ಸನ್ಮಾನಿಸಲಾಯಿತು. ಆಗಸ್ಟ್ 15, 2026ರಂದು ನಡೆದ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ಸಾಧನೆಗೆ ಶ್ರಮಿಸಿದ ಶಿಕ್ಷಕರ ಸೇವೆಯನ್ನು ಗುರುತಿಸಿ "ಅಭಿನಂದನಾ ಪತ್ರ" ನೀಡಿ ಸನ್ಮಾನಿಸಲಾಯಿತು.

ಇದೇ ರೀತಿ ಜಿಲ್ಲಾ ಪಂಚಾಯತ್ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದಲೂ 2025–26ನೇ ಸಾಲಿನಲ್ಲಿ 100% ಫಲಿತಾಂಶ ನೀಡಿದ ಸಾಧನೆಗಾಗಿ ಮುಖ್ಯೋಪಾಧ್ಯಾಯರಿಗೆ ಹಾಗೂ ಸಿಬ್ಬಂದಿ ವರ್ಗದವರಿಗೆ ಪ್ರತ್ಯೇಕವಾಗಿ ಅಭಿನಂದನಾ ಪತ್ರ ನೀಡಿ ಪ್ರೋತ್ಸಾಹಿಸಲಾಯಿತು. ಸತತ ಶ್ರಮದಿಂದ ವಿದ್ಯಾರ್ಥಿಗಳನ್ನು ಉತ್ತಮ ಸಾಧನೆಗೆ ಪ್ರೇರೇಪಿಸಿದ ಶಿಕ್ಷಕರ ಈ ಸಾಧನೆಗೆ ಸಾರ್ವಜನಿಕ ವಲಯದಿಂದಲೂ ಮೆಚ್ಚುಗೆ ವ್ಯಕ್ತವಾಗಿದೆ ಈ ಕಾರ್ಯಕ್ರಮದಲ್ಲಿ ತಾಲೂಕಾ ಆಡಳಿತ, ಶಿಕ್ಷಣ ಇಲಾಖೆಯ ಅಧಿಕಾ–ರಿಗಳು, ಶಾಲಾ ಆಡಳಿತ ಮಂಡಳಿ ಹಾಗೂ ಪೋಷಕರು ಉಪಸ್ಥಿತರಿದ್ದರು.

## 80ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಘರಿಬ ನವಾಜ್ ರಿಲೈಫ ಫೌಂಡೇಶನ ವತಿಯಿಂದ ರಕ್ತದಾನ ಶಿಬಿರ ಯಶಸ್ವಿ

ನೈಜ್ಯ ದೆಸೆ ನ್ಯೂಸ್

**ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲೂಕಿನಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಘ–ರೀಬ್ ನವಾಜ್ ರಿಲೀಫ್ ಫೌಂಡೇಶನ್ ನೇತೃತ್ವದಲ್ಲಿ ರಕ್ತದಾನ ಶಿಬಿರವು ಅಂಜುಮನ್ ಶಾದಿ ಮಹಲ್ ಆವರಣದಲ್ಲಿ ಯಶಸ್ವಿಯಾಗಿ ಜರುಗಿತು.**

ಸ್ವಾತಂತ್ರ್ಯದ ಮಹತ್ವವನ್ನು ಸ್ಮರಿಸುತ್ತಾ "ರಕ್ತದಾನವೇ ಶ್ರೇಷ್ಠ ದಾನ" ಎಂಬ ಸಂದೇಶದೊಂದಿಗೆ ಆಯೋಜಿಸಿದ್ದ ಈ ಶಿಬಿರಕ್ಕೆ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು. ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಗಣ್ಯರು: ಕಾರ್ಯಕ್ರಮದ ಅತಿಥಿಗಳಾಗಿ ಮೌಲಾನಾ ಸಜ್ಜಾದ್ ಹುಸೇನ್, ಮೌಲಾನಾ ನದೀಮ್ ನೂರಿ, ಡಾ. ಶಿವಾನಂದ್ ಕುಬಸದ, ಡಾ. ಸವಿತಾ ಕರ್ಲವಾಡಿ ಅವರು ಆಗಮಿಸಿ ರಕ್ತದಾನಿಗಳಿಗೆ ಪ್ರೋತ್ಸಾಹ ನೀಡಿದರು.

ಅಂಜುಮನ್ ಹಿರಿಯರಾದ ಮುನಿರಹ್ಮದ್ ಮೊಮಿನ್, ಮುನ್ನಾ




ಮುಲ್ಲಾ, ಶಿರಾಜ್ ಹೊರಟ್ಟಿ, ರೆಹಮಾನ್ ಮಣಿಯಾರ್, ಡಿ.ಎಸ್.ಎಸ್ ಹಾಗೂ ಸಾಮಾಜಿಕ ಅಭಿವೃದ್ಧಿ ಯೋಜನೆಯ ಚಿಂತಕ ಪ್ರಕಾಶ್ ಮಾಂಗ್, ಜಿ.ಎನ್. ಆರ್ ಫೌಂಡೇಶನ್ ಅಧ್ಯಕ್ಷ ಆಸಿಫ್ ಖಾದ್ರಿ, ಅಮಾನುಲ್ಲಾ ಮುಲ್ಲಾ, ಮೊಹಮ್ಮದ್ ಹುಸೇನ್ ಕುಡಚಿ, ಜುನೈದ್ ಸಾರವಾಣ, ತಾಹೀಲ್ ಜಮಾದಾರ, ರಿಯಾಜ್ ಬಿಸ್ತಿ ಮೊದಲಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

55 ಜನರಿಂದ ರಕ್ತದಾನ ಈ ಶಿಬಿರದಲ್ಲಿ ಒಟ್ಟು 55 ಮಂದಿ ಸ್ವಯಂ ಪ್ರೇರಣೆಯಿಂದ ರಕ್ತದಾನ ಮಾಡಿದರು. ದೇಶ ಸೇವೆಯ ಜೊತೆಗೆ ಮಾನವ ಸೇವೆಯನ್ನೂ ಮಾಡಿದ ಎಲ್ಲಾ ರಕ್ತದಾನಿಗಳನ್ನು ಸಂಘಟಕರು ಅಭಿನಂದಿಸಿದರು. ಘರೀಬ್ ನವಾಜ್ ರಿಲೀಫ್ ಫೌಂಡೇಶನ್ ಪದಾಧಿಕಾರಿಗಳು ಮತ್ತು ಸ್ವಯಂ ಸೇವಕರು ಶಿಬಿರವನ್ನು ಯಶಸ್ವಿಗೊಳಿಸಲು ಶ್ರಮಿಸಿದರು.

## ಜಾಲಹಳ್ಳಿ ಗ್ರಾಮ ಪಂಚಾಯತ್‌ನಲ್ಲಿ ಅದ್ದೂರಿ 80ನೇ ಸ್ವಾತಂತ್ರ್ಯ ದಿನಾಚರಣೆ

ನೈಜ್ಯ ದೆಸೆ ನ್ಯೂಸ್

**ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮ ಪಂಚಾಯತ್ ಕಾರ್ಯಾಲಯದಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅದ್ದೂ–ರಿಯಾಗಿ ಆಚರಿಸಲಾಯಿತು. ಗ್ರಾಮ ಪಂಚಾಯತ್ ಅಧ್ಯಕ್ಷೆ ಹನುಮಂತಿ ಶಿವಬಸಪ್ಪ ರಾಮ್ ಪಾಳಿ ಧ್ವಜಾರೋಹಣ ನೆರವೇರಿಸಿದರು. ಶಾಲಾ ಮಕ್ಕಳು ರಾಷ್ಟ್ರಗೀತೆ ಹಾಡಿದರು.**

ಈ ಸಂದರ್ಭದಲ್ಲಿ ವಕೀಲ ರಾಘವೇಂದ್ರ ಕೊಲ್ಕರ್, ಕೆರೆಲಿಂಗಪ್ಪ



ನಾಡಗೌಡ ಹಾಗೂ ಗ್ರಾಮ ಪಂಚಾಯತ್ ಸದಸ್ಯ ಅಬ್ದುಲ್ ರೆಹಮಾನ್ ಕುರಿಸಿ ಮಾತನಾಡಿ, ಸ್ವಾತಂತ್ರ್ಯ ಹೋರಾಟಗಾರರ ತ್ಯಾಗವನ್ನು ಸ್ಮರಿಸಿ, ದೇಶದ ಏಕತೆ, ಸಾಮಾಜಿಕ ನ್ಯಾಯ, ಸೌಹಾರ್ದತೆ ಹಾಗೂ ಅಭಿವೃದ್ಧಿಗಾಗಿ ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಪಿಡಿಒ ಶ್ರೀಮತಿ ಲಕ್ಷ್ಮಿ, ಉಪಾಧ್ಯಕ್ಷ ವೀರೇಶ ಅರಕೇರಿ, ಗ್ರಾಮ ಪಂಚಾಯತ್ ಸದಸ್ಯರು, ಸಿಬ್ಬಂದಿ ವರ್ಗದವರು , ಶಿಕ್ಷಕರು, ವಿದ್ಯಾರ್ಥಿಗಳು, ವಿವಿಧ ಸಂಘಟನೆಯ ಪದಾಧಿಕಾರಿಗಳು ಹಾಗೂ ಸದಸ್ಯರು ಹಾಗೂ ಸಾರ್ವಜನಿಕರು ಉಪಸ್ಥಿತ–ರಿದ್ದರು.

## ಸಾಹಿತ್ಯ ಸಿಂಚನ

### ...ನನ್ನ ಭಾರತ ನನ್ನ ಹೆಮ್ಮೆ...

ಈ ಮಣ್ಣೇ ನನ್ನ ದೇವರು
ಈ ಗಾಳಿಯೇ ನನ್ನ ಉಸಿರು
ಈ ತಿರಂಗಾನೇ ನನ್ನ ಹೆಮ್ಮೆ
ಇದಕ್ಕಿಂತ ಬೇರೆ ಏನು ಬೇಕು.

ಕೇಸರಿ – ಹುತಾತ್ಮರ ತ್ಯಾಗದ ಕಥೆ
ಬಿಳಿ – ಶಾಂತಿ ಸತ್ಯದ ನುಡಿ
ಹಸಿರು – ರೈತನ ಬೆವರಿನ ಫಲ
ನಡುವೆ ಅಶೋಕ ಚಕ್ರ – ಸದಾ ಮುಂದೆ
ನಡೆಯೋ ದಾರಿ

ಗುಂಡಿಗೆ ಎದೆ ತೋರಿಸಿ ನಿಂತ ಸೈನಿಕ
ಜೈಲಿಗೆ ಹೋಗಿ ಬಂದ ಸ್ವಾತಂತ್ರ್ಯ
ಹೋರಾಟಗಾರರು
ಅವರ ಕನಸಿನ ಫಲವೇ ಈ ಸ್ವಾತಂತ್ರ್ಯ

ತಲೆ ಎತ್ತಿ ಹೇಳೋಣ ಜೋರಾಗಿ
ನಾನು ಭಾರತೀಯ... ನಾನು ಹೆಮ್ಮೆ ಪಡ್ತೀನಿ
ಈ ದೇಶ ಉಳಿಸೋ ಜವಾಬ್ದಾರಿ ನಮ್ಮದು

ಜೈ ಹಿಂದ್... ವಂದೇ ಮಾತರಂ
ಭಾರತ ಮಾತಾ ಕಿ ಜೈ.

ಎಸ್. ದುರಗಪ್ಪ. ಕುಷ್ಟಗಿ.
ಬರಹಗಾರ ಹಾಗೂ ಕನ್ನಡ ಚಲನಚಿತ್ರ ಸಹ–ನಟ. 8095727664

1ನೇ ಪುಟದಿಂದ....

ಹೋರಾಟಗಾರರ ತ್ಯಾಗ ಮತ್ತು ಬಲಿದಾನವನ್ನು ಸ್ಮರಿಸುವುದಷ್ಟೇ ಅಲ್ಲದೆ, ಅವರು ಕಂಡ ಕನಸಿನ ಭಾರತವನ್ನು ನಿರ್ಮಿಸುವ ಜವಾಬ್ದಾರಿ ಇಂದಿನ ಯುವಜನರ ಮೇಲಿದೆ ಎಂದು ಹೇಳಿದರು. ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಜವಾಬ್ದಾರಿಯುತ ನಾಗ–ರಿಕರಾಗಿ ಹೊರಹೊಮ್ಮಬೇಕು. ದೇಶದ ಪ್ರಗತಿಯಲ್ಲಿ ಯುವಕರ ಕೊಡುಗೆ ಅತ್ಯಂತ ಮಹತ್ವದ್ದಾಗಿದೆ ಎಂದು ಅವರು ತಿಳಿಸಿದರು.

ವಿಶೇಷವಾಗಿ ಫಾರ್ಮಸಿ ಹಾಗೂ ನರ್ಸಿಂಗ್ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಆರೋಗ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುವ ಅವಕಾಶ ಹೊಂದಿದ್ದಾರೆ. ಆರೋಗ್ಯ ಸೇವೆಯು ಮಾನವ ಸೇವೆಯ ಪ್ರಮುಖ ಕ್ಷೇತ್ರವಾಗಿದ್ದು, ರೋಗಿಗಳು ಹಾಗೂ ಸಾರ್ವಜನಿಕರೊಂದಿಗೆ ಮಾನವೀಯತೆ, ಕರುಣೆ ಮತ್ತು ಸೇವಾ ಮನೋಭಾವದಿಂದ ನಡೆದುಕೊಳ್ಳಬೇಕು. ತಮ್ಮ ವೃತ್ತಿಪರ ಜ್ಞಾನವನ್ನು ಸಮಾಜದ ಒಳಿತಿಗಾಗಿ ಬಳಸುವ ಮೂಲಕ ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡಬೇಕು ಎಂದು ಅವರು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಅವರು, "ದೇಶಪ್ರೇಮವೆಂದರೆ ಕೇವಲ ರಾಷ್ಟ್ರಧ್ವಜ–ಕ್ಕೆ ಗೌರವ ಸಲ್ಲಿಸುವುದಲ್ಲ; ನಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿ ನಿರ್ವಹಿಸುವುದು, ಸಮಾಜದ ಒಳಿತಿಗಾಗಿ ಕೆಲಸ ಮಾಡುವುದು ಮತ್ತು ದೇಶದ ಪ್ರಗತಿಗೆ ನಮ್ಮದೇ ಆದ ಕೊಡುಗೆ ನೀಡುವುದಾಗಿದೆ" ಎಂಬ ಸಂದೇಶವನ್ನು ವಿದ್ಯಾರ್ಥಿಗಳಿಗೆ ನೀಡಿದರು. ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ವಿದ್ಯಾರ್ಥಿಗಳಲ್ಲಿ ದೇಶಭಕ್ತಿ, ರಾಷ್ಟ್ರಾಭಿಮಾನ, ಶಿಸ್ತು, ನಾಯಕತ್ವ ಗುಣ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವ ಉದ್ದೇಶದಿಂದ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿ–ತ್ತು. ವಿದ್ಯಾರ್ಥಿಗಳು ದೇಶಭಕ್ತಿ ಗೀತೆಗಳು, ಭಾಷಣಗಳು ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದರು. ವಿದ್ಯಾರ್ಥಿಗಳ ಉತ್ಸಾಹಭರಿತ ಭಾಗವಹಿಸುವಿಕೆ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದಿತು. ಕಾರ್ಯಕ್ರಮದ ಸಂದರ್ಭದಲ್ಲಿ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವಿದ್ಯಾರ್ಥಿಗಳಿಗೆ ಸ್ವಾತಂತ್ರ್ಯ ದಿನಾಚರಣೆಯ ಐತಿಹಾಸಿಕ ಮಹತ್ವ ಹಾಗೂ ಸ್ವಾತಂತ್ರ್ಯದ ಮೌಲ್ಯಗಳ ಕುರಿತು ಮಾರ್ಗದರ್ಶನ ನೀಡಿದರು. ದೇಶದ ಸಂವಿಧಾನ, ಪ್ರಜಾಪ್ರಭುತ್ವ, ಏಕತೆ ಮತ್ತು ಸೌಹಾರ್ದತೆಯನ್ನು ಗೌರವಿಸುವಂತೆ ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಲಾಯಿತು. ಲೋಟಸ್ ಕಾಲೇಜಿನಲ್ಲಿ ನಡೆದ ಈ ಸ್ವಾತಂತ್ರ್ಯ ದಿನಾಚರಣೆಯು ಕೇವಲ ಧ್ವಜಾರೋಹಣಕ್ಕೆ ಸೀಮಿತವಾಗದೆ, ವಿದ್ಯಾರ್ಥಿಗಳಲ್ಲಿ ದೇಶಪ್ರೇಮ, ಸಾಮಾಜಿಕ ಜವಾಬ್ದಾರಿ ಹಾಗೂ ರಾಷ್ಟ್ರ ಸೇವೆಯ ಮನೋಭಾವವನ್ನು ಮೂಡಿಸುವ ಅರ್ಥಪೂರ್ಣ ಕಾರ್ಯಕ್ರಮವಾಗಿ ಮೂಡಿಬಂತು. ಕಾರ್ಯಕ್ರಮವು ಅತ್ಯಂತ ಶಿಸ್ತುಬದ್ಧವಾಗಿ, ಅರ್ಥಪೂರ್ಣವಾಗಿ ಹಾಗೂ ಹೃದಯಸ್ಪರ್ಶಿಯಾಗಿ ನೆರವೇರಿತು. ಕೊನೆಯಲ್ಲಿ ಎಲ್ಲರೂ ರಾಷ್ಟ್ರದ ಏಕತೆ, ಶಾಂತಿ, ಸಮೃದ್ಧಿ ಹಾಗೂ ಅಭಿವೃದ್ಧಿಗಾಗಿ ತಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿ ನಿರ್ವಹಿಸುವ ಸಂಕಲ್ಪದೊಂದಿಗೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಉಪನ್ಯಾಸಕರಾದ ಶ್ರೀ ಜಾವೀದ್ ಶೇಖ್, ಶ್ರೀ ಶಶಾಂಕ್, ಶ್ರೀ ಸೂರಜ್ ದಿಸ್ಲೆ, ಕುಮಾರಿ ನಜ್ಮಾ, ಶ್ರೀಮತಿ ಈಶ್ವರಿ ರಾಠೋಡ, ಕುಮಾರಿ ಫೌಜಿಯಾ ಮಕಂದಾರ ಸೇ–ರಿದಂತೆ ಇತರೆ ಉಪನ್ಯಾಸಕರು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

# ವಿರ್‌ಗೊಟ್ ಸರ್ಕಾರಿ ಶಾಲೆಯಲ್ಲಿ ಅದ್ದೂರಿಯಾಗಿ 80ನೇ ಸ್ವಾತಂತ್ರ್ಯ ದಿನಾಚರಣೆ

❑ ನೈಜ್ಯ ದೆಸೆ ನ್ಯೂಸ್

**ದೇವದುರ್ಗ/ಜಾಲಹಳ್ಳಿ, ಆ.15: ಜಾಲಹಳ್ಳಿ ಸಮೀಪದ ವಿರ್‌ಗೊಟ್ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಂಭ್ರಮದಿಂದ ಆಚ–ರಿಸಲಾಯಿತು.**

ಕಾರ್ಯಕ್ರಮದ ಧ್ವಜಾರೋಹಣವನ್ನು ಶಾಲೆಯ ಮುಖ್ಯೋಪಾಧ್ಯಾಯರಾದ ಶಂಕರ್ ಗೌಡ ನೆರವೇರಿಸಿದರು. ಬಳಿಕ ಮಾತನಾಡಿದ ಅವರು, ಸ್ವಾತಂತ್ರ್ಯ ದಿನಾಚರಣೆ ಇಡೀ ದೇಶದ ಹಬ್ಬವಾಗಿದ್ದು, ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ ಮಹಾನ್ ದೇಶಭಕ್ತರು ಹಾಗೂ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ–ಬಲಿದಾನಗಳನ್ನು ಸದಾ ಸ್ಮರಿಸಬೇಕು ಎಂದುಹೇಳಿದರು. ಶಿಕ್ಷಕ ಲಕ್ಷ್ಮೀಕಾಂತ್ ಅವರು ಕಾರ್ಯಕ್ರಮದ ಕುರಿತು



ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.

ಮಕ್ಕಳಿಂದ ಸಾಂಸ್ಕೃತಿಕ ವೈಭವ ಧ್ವಜಾರೋಹಣದ ಬಳಿಕ ಶಾಲೆಯ ಮುದ್ದು ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಮಕ್ಕಳ ಪ್ರತಿಭೆಗೆ ನೆರೆದಿದ್ದ ಗ್ರಾಮಸ್ಥರು ಹಾಗೂ ಪೋಷಕರು ಮೆಚ್ಚುಗೆ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ಸಯ್ಯದ್ ಸಾಬ್, ಕಾಂತಮ್ಮ ಮಾನಪ್ಪ, ಊರಿನ ಹಿರಿಯ ಮುಖಂಡರಾದ

ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯರಾದ ಭೀಮಣ್ಣ ವಿರ್‌ಗೊಟ್ ಮಾತನಾಡಿ, ಗ್ರಾಮಸ್ಥರು, ಸಾರ್ವಜನಿಕರು ಹಾಗೂ ಪೋಷಕರಿಗೆ ಸ್ವಾತಂತ್ರ್ಯ ದಿನಾಚರಣೆಯ ಶುಭಾಶಯಗಳನ್ನು ಕೋರಿದರು. ಇಂದಿನ ಮಕ್ಕಳೇ ಮುಂದಿನ ಭಾರತದ ಭವಿಷ್ಯವಾಗಿದ್ದು, ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಕಡೆ ಹೆಚ್ಚಿನ ಗಮನಹರಿಸಬೇಕು. ಮೊಬೈಲ್ ಬಳಕೆಯಿಂದ ದೂರವಿದ್ದು, ಶಿಕ್ಷಣ ಮತ್ತು ಉತ್ತಮ ಭವಿಷ್ಯ ನಿರ್ಮಾಣಕ್ಕೆ ಆದ್ಯತೆ ನೀಡಬೇಕು ಎಂದು ಹಿತವಚನ ನೀಡಿದರು.

ಮಿಯಾಸಾಬ್, ಸುಭಾನ್ ಸಾಬ್, ಭೀಮರಾಯ, ಮೊದಿನ್ ಸಾಬ್, ದುರ್ಗಪ್ಪ, ಬಸ್ಸನಗೌಡ, ಅಂಗನವಾಡಿ ಕಾರ್ಯಕರ್ತೆ ದೇವಮ್ಮ, ಆಶಾ ಕಾರ್ಯಕರ್ತೆ ನಿಂಗಮ್ಮ, ಶಾಲೆಯ ಸಿಬ್ಬಂದಿ ವರ್ಗ, ಊರಿನ ಪ್ರಮುಖರು, ಪೋಷಕರು ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

# ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಯಶಸ್ವಿ ಪ್ರಚಾರಕ್ಕೆ ಪ್ರಶಂಸನಾ ಪ್ರಮಾಣ



❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸಿಂಧನೂರು ತಾಲೂಕಿನಲ್ಲಿ ಸಾಮಾಜಿಕ ಜಾಲತಾಣಗಳು ಹಾಗೂ ವಿವಿಧ ಮಾಧ್ಯಮಗಳ ಮೂಲಕ ವ್ಯಾಪಕ ಜನಜಾಗೃತಿ ಮತ್ತು ಪ್ರಚಾರ ಕಾರ್ಯ ಕೈಗೊಂಡ ಹಿನ್ನೆಲೆಯಲ್ಲಿ ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಹಿರೇಮಠ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಪ್ರಶಂಸಿಸಿದೆ.**

ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಮಹತ್ವ, ಮಕ್ಕಳಿಗೆ ಪೋಲಿಯೋ ಹನಿ ನೀಡುವ ಅಗತ್ಯತೆ ಹಾಗೂ ಕಾರ್ಯಕ್ರಮದ ಯಶಸ್ಸಿಗೆ ಸಾರ್ವಜನಿಕರ ಸಹಭಾಗಿತ್ವವನ್ನು ಹೆಚ್ಚಿಸುವ ಉದ್ದೇಶದಿಂದ ಸಾಮಾಜಿಕ ಜಾಲತಾಣಗಳು, ಪತ್ರಿಕೆಗಳು ಹಾಗೂ ಇತರ ಮಾಧ್ಯಮಗಳ ಮೂಲಕ ಪರಿಣಾಮಕಾರಿ ಪ್ರಚಾರ ಕಾರ್ಯ ನಡೆಸಲಾಗಿ–ತ್ತು. ಈ ಕಾರ್ಯದ ಫಲವಾಗಿ ಕಾರ್ಯಕ್ರಮದ ಕುರಿತು ಸಾರ್ವಜನಿಕರಲ್ಲಿ ವ್ಯಾಪಕ ಅರಿವು ಮೂಡಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಪೋಷಕರು ತಮ್ಮ ಮಕ್ಕಳಿಗೆ ಪೋಲಿಯೋ ಹನಿ ಹಾಕಿಸುವಲ್ಲಿ ಭಾಗವಹಿಸಿದ್ದಾರೆ.

ಈ ಉತ್ತಮ ಕಾರ್ಯವನ್ನು ಗುರುತಿಸಿ ಮಾನ್ಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ನಂದಿತಾ ಅವರು ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಹಿರೇಮಠ ಹಾಗೂ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರಿಗೆ ಅಭಿನಂದನೆ ಸಲ್ಲಿಸಿ ಪ್ರಶಂಸನಾ ಪ್ರಮಾಣ ಪತ್ರವನ್ನು ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ನಂದಿತಾ ಅವರು, ಆರೋಗ್ಯ ಇಲಾಖೆಯ ಕಾರ್ಯಕ್ರಮಗಳನ್ನು ಜನಸಾಮಾನ್ಯ–ರಿಗೆ ತಲುಪಿಸುವಲ್ಲಿ ಆರೋಗ್ಯ ಶಿಕ್ಷಣಾಧಿಕಾ–ರಿಗಳ ಪಾತ್ರ ಮಹತ್ವದ್ದಾಗಿದ್ದು, ಅವರ ನಿಷ್ಠೆ ಮತ್ತು ಸಮರ್ಪಣೆಯಿಂದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವು ತಾಲೂಕಿನಲ್ಲಿ ಯಶಸ್ವಿಯಾಗಿ ಜರುಗಲು ಸಹಕಾ–ರಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಆರೋಗ್ಯ ಇಲಾಖೆಯ ಎಲ್ಲಾ ಕಾರ್ಯಕ್ರಮಗಳು ಅನುಷ್ಠಾನ ಅಧಿಕಾರಿಗಳಾದ ಡಾಕ್ಟರ ಚಂದ್ರಶೇಖರಯ್ಯ ಸ್ವಾಮಿ . ಡಾಕ್ಟರ ಗಣೇಶ. ಡಾಕ್ಟರ ಯಶೋದಾ ಮೇಡಂ. ಡಾಕ್ಟರ ಶಿವಕುಮಾರ. ಡಾಕ್ಟರ ಮನೋಹರ ಪತ್ತಾರ . ವಿವಿಧ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದು, ಪ್ರಶಸ್ತಿ ಪುರಸ್ಕೃತ ಅಧಿಕಾರಿಗಳಿಗೆ ಶುಭಾಶಯಗಳನ್ನು ಕೋರಿದರು.

# ಜಾಲಹಳ್ಳಿಯ ಜನತಾ ಕಾಲೋನಿ ಸರ್ಕಾರಿ ಶಾಲೆಯಲ್ಲಿ ಅದ್ದೂರಿ 80ನೇ ಸ್ವಾತಂತ್ರ್ಯ ದಿನಾಚರಣೆ

❑ ನೈಜ್ಯ ದೆಸೆ ನ್ಯೂಸ್

**ದೇವದುರ್ಗ/ಜಾಲಹಳ್ಳಿ, ಆ.15: ಜಾಲಹಳ್ಳಿ ಗ್ರಾಮದ ಜನತಾ ಕಾಲೋನಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಂಭ್ರಮ ಹಾಗೂ ಅದ್ದೂರಿಯಾಗಿ ಆಚರಿಸಲಾಯಿತು.**

ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಖುರ್ಷಿದ್ ಪಟೇಲ್ ಹಾಗೂ ಮುಖ್ಯೋಪಾಧ್ಯಾಯಿನಿ ಉಲ್ಫತುನ್ನಿಸಾ ಅವರು ಜಂಟಿಯಾಗಿ ಧ್ವಜಾರೋಹಣ ನೆರವೇರಿಸಿದರು. ಅತಿಥಿಗಳು ಹಾಗೂ ಪೋಷಕರನ್ನು ಅತಿಥಿ ಶಿಕ್ಷಕ ಸೋಮಣ್ಣ ನಾಯಕ ಸ್ವಾಗತಿಸಿದರು.

ಮಕ್ಕಳಿಂದ ಮನರಂಜಿಸಿದ ಸಾಂಸ್ಕೃತಿಕ ಕಾರ್ಯಕ್ರಮ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಶಾಲಾ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಮಕ್ಕಳ ನೃತ್ಯ, ದೇಶಭಕ್ತಿ ಗೀತೆ ಹಾಗೂ ವಿವಿಧ ಪ್ರದರ್ಶನಗಳು ನೆರೆದಿದ್ದವರ ಮೆಚ್ಚುಗೆಗೆ ಪಾತ್ರವಾದವು.

ಗಣ್ಯರಿಗೆ ಸನ್ಮಾನ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಪತ್ರಕರ್ತ ಖಾಜಾ ಹುಸೇನ್ ಬಾಬಾ ಜಾಲಹಳ್ಳಿ, ಮೈಬೂಬ್ ಸಾಬ್ ಬಾಂಬೆ ಸರ್‌ನೌಬತ್, ಯಾಸಿನ್ ಮುಲ್ಲಾ, ಹಾಜಿ ಖಾಜಾ ಹುಸೇನ್ ಬಾಂಬೆ ಸೇಠ್, ಬುಡ್ಡಪ್ಪ ಕಾವಲಿ, ನಾಗರಾಜ್ ಪೂಜಾರಿ, ಚಂದ್ರು ಪೂಜಾರಿ ಹಾಗೂ ಮೈನುದ್ದಿನ್ ಜಕಾತಿ ಸೇರಿದಂತೆ ಗಣ್ಯರನ್ನು ಶಾಲೆಯ ವತಿಯಿಂದ ಸನ್ಮಾನಿಸಲಾಯಿತು.

ಪ್ರಮುಖರ ಸಂದೇಶ



ಮುಖ್ಯೋಪಾಧ್ಯಾಯಿನಿ ಉಲ್ಫತುನ್ನಿಸಾ ಅವರು ಮಾತನಾಡಿ, ಕಾರ್ಯಕ್ರಮಕ್ಕೆ ಆಗಮಿಸಿದ ಎಲ್ಲಾ ಪೋಷಕರು ಹಾಗೂ ಅತಿಥಿಗಳಿಗೆ 80ನೇ ಸ್ವಾತಂತ್ರ್ಯ ದಿನಾಚರಣೆಯ ಶುಭಾಶಯಗಳನ್ನು ಕೋರಿದರು. ಹಿರಿಯ ಮುಖಂಡ ಬುಡ್ಡಪ್ಪ ಕಾವಲಿ ಅವರು ಮಾತನಾಡಿ, ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಜೀವವನ್ನೇ ಬಲಿದಾನ ಮಾಡಿದ ಮಹಾನ್ ಸ್ವಾತಂತ್ರ್ಯ ಹೋರಾಟಗಾರರನ್ನು ಸ್ಮರಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಹೇಳಿದರು.

ಮುಖಂಡ ಬಾಬಾ ಮೆಡಿಕಲ್ ಮಾತನಾಡಿ, ಜನತಾ ಕಾಲೋನಿ ಸರ್ಕಾರಿ ಶಾಲೆಯು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಪ್ರತಿವರ್ಷ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಮಕ್ಕಳಿಂದ ಅದ್ಭುತ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಗಮನ ಸೆಳೆಯುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಎಸ್‌ಡಿಎಂಸಿ ಅಧ್ಯಕ್ಷ ಖುರ್ಷಿದ್ ಪಟೇಲ್ ಮಾತನಾಡಿ, ಸ್ವಾತಂತ್ರ್ಯ ದಿನಾಚರಣೆ ಇಡೀ ದೇಶದ ಹಬ್ಬವಾಗಿದ್ದು, ದೇಶದ ಸ್ವಾತಂತ್ರ್ಯಕ್ಕಾಗಿ ಪ್ರಾಣ ತ್ಯಾಗ ಮಾಡಿದ ಮಹಾನ್ ದೇಶಭಕ್ತರು ಹಾಗೂ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ–ಬಲಿದಾನಗಳನ್ನು ಸದಾ ಸ್ಮರಿಸಬೇಕು ಎಂದು ಹೇಳಿದರು.

ಶಾಲೆಯ ಶಿಕ್ಷಕರು ಹಾಗೂ ಮಕ್ಕಳು ಕಲಿಕಾ ಚಟುವಟಿಕೆಗಳಲ್ಲಿ ಉತ್ತಮವಾಗಿ ತೊಡಗಿಸಿಕೊಂಡಿದ್ದಾರೆ. ಜಾಲಹಳ್ಳಿಯ ಸರ್ಕಾರಿ ಶಾಲೆಗಳ ಪೈಕಿ ಜನತಾ ಕಾಲೋನಿ ಶಾಲೆಯು ಉತ್ತಮ ಗುಣಮಟ್ಟ ಹೊಂದಿದೆ. ಇಂದಿನ ಮಕ್ಕಳೇ ಮುಂದಿನ ಭಾರತದ ಭವಿಷ್ಯವಾಗಿದ್ದು, ಈ ಶಾಲೆಯ ಮಕ್ಕಳು ಮುಂದೆ ಜಾಲಹಳ್ಳಿಯ ಕೀರ್ತಿಯನ್ನು ಹೆಚ್ಚಿಸಲಿ ಎಂದು ಆಶಿಸಿದರು.

ಉಪಸ್ಥಿತರಿದ್ದ ಗಣ್ಯರು ಹಾಜಿ ಖಾಜಾ ಹುಸೇನ್ ಸಾಬ್ ಬಾಂಬೆ ಸೇಠ್, ಗ್ರಾಮ ಪಂಚಾಯಿತಿ ಸದಸ್ಯ ಶಿವಪ್ಪ ನಾಯಕ ಗಾಂಜಿ, ಭೀಮಣ್ಣ ಗುಮೇದರ್, ರಂಗಣ್ಣ ಕೊಲ್ಕರ್, ಅಬ್ದುಲ್ ನಬಿ ಸರ್‌ನೌಬತ್, ರಾಮು ಟೈಲರ್, ಮಹೇಬೂಬ್ ಪರಾಶಿ, ಮುಸ್ತಫಾ ಯಾದ್ಗೀರ್, ಬಸವರಾಜ್ ಅಯ್ಯಳ್, ಶಿವಪ್ಪ ಅಂಜಳ್, ತಿಮ್ಮಣ್ಣ, ದುರುಗಪ್ಪ, ಮುದುರಂಗ ಮ್ಯಾಗೇರಿ, ಮಹೇಬೂಬ್ ಚಿಕ್ಕಬುದೂರ್ ಬಾಂಬೆ, ಮುದುರಂಗಪ್ಪ ವಠಾರ, ಮೊಹಮ್ಮದ್ ಇದ್ರಿಸ್, ಹುಸೇನ್ ಆಗಬಾಯಿ, ರಾಜ ಮೊಹಮ್ಮದ್, ಶಾರುಖ್, ಚಂದ್ರು ಪೂಜಾರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಶಿಕ್ಷಕಿಯರಾದ ಸುನಿತಾ, ಮುಖ್ಯ ಅಡುಗೆ ಸಿಬ್ಬಂದಿಗಳಾದ ಮಲ್ಲಮ್ಮ ಹಾಗೂ ಎಲ್ಲಮ್ಮ, ಶಾಲೆಯ ಪಾಲಕರಾದ ಕರಿಯಮ್ಮ ಅಂಜಳ, ರಿಯಾನ ಬೇಗಮ್ ಸೇರಿದಂತೆ ಸಿಬ್ಬಂದಿ ವರ್ಗ, ಪೋಷಕರು ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಪ್ರತಿಷ್ಠಿತ ಫೆಡರಲ್ ಶಿಕ್ಷಣ ಸಂಸ್ಥೆಯಲ್ಲಿ 80ನೇ ಸ್ವಾತಂತ್ರ್ಯೋತ್ಸವದ ಸಂಭ್ರಮ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರು ನಗರದ ಯರಮರಸ್ ಕ್ಯಾಂಪ್‌ನಲ್ಲಿರುವ ಪ್ರತಿಷ್ಠಿತ ಫೆಡರಲ್ ಶಿಕ್ಷಣ ಸಂಸ್ಥೆಯ ಸಮೂಹಗಳ ವತಿಯಿಂದ 80ನೇ ಸ್ವಾತಂತ್ರ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.**

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮಾಜಿ ಡಿಜಿಪಿ ಹಾಗೂ ಹಿರಿಯ ವಕೀಲರಾದ ಶ್ರೀ ಶಿವಶಂಕರ ಎನ್. ಅವರು ಧ್ವಜಾರೋಹಣ ನೆರವೇರಿಸಿದರು. ನಂತರ ಮಾತನಾಡಿದ ಅವರು, ಫೆಡರಲ್ ಶಿಕ್ಷಣ ಸಂಸ್ಥೆಯಲ್ಲಿ ನಗರದ ವಿದ್ಯಾರ್ಥಿಗಳಿಗಿಂತ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದು ಹೇಳಿದರು.

ಸ್ವಾತಂತ್ರ್ಯ ಹೋರಾಟದ ಇತಿಹಾಸ ಹಾಗೂ ದೇಶವು ಸ್ವಾತಂತ್ರ್ಯ ಪಡೆದ 80 ವರ್ಷಗಳ




ಪಯಣವನ್ನು ವಿದ್ಯಾರ್ಥಿಗಳಿಗೆ ಪರಿಚಯಿಸಿದ ಅವರು, ಮಕ್ಕಳಲ್ಲಿ ಗ್ರಾಮ, ತಾಲೂಕು, ಸಮುದಾಯ, ಜಿಲ್ಲೆ, ರಾಜ್ಯ ಹಾಗೂ ರಾಷ್ಟ್ರ?'ನನ್ನದು' ಎಂಬ ಭಾವನೆ ಬೆಳೆಸಬೇಕು. ದೇಶದ ಅಭಿವೃದ್ಧಿಯಲ್ಲಿ ಯುವಜನರ ಪಾತ್ರ ಮಹತ್ವದ್ದಾಗಿದ್ದು, ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಜವಾಬ್ದಾರಿಯುತ ನಾಗರಿಕರಾಗಿ ದೇಶದ ಪ್ರಗತಿಗೆ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ 2025?26ನೇ ಸಾಲಿನ 10ನೇ ತರಗತಿ ಪರೀಕ್ಷೆಯಲ್ಲಿ ಅತ್ಯಧಿಕ ಅಂಕಗಳನ್ನು ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ವಿದ್ಯಾರ್ಥಿಗಳು ವಿವಿಧ ಸ್ವಾತಂತ್ರ್ಯ ಹೋರಾಟಗಾರರ ವೇಷಧರಿಸಿ ದೇಶಭಕ್ತಿಯ ಸಂದೇಶ ಸಾರಿದರು. ಅಲ್ಲದೆ, ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿ–ಕ ಕಾರ್ಯಕ್ರಮಗಳು, ದೇಶಭಕ್ತಿ ಗೀತೆಗಳು ಹಾಗೂ ಮನರಂಜನಾ ಕಾರ್ಯಕ್ರಮಗಳು ನಡೆದವು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಮೊಹಮ್ಮದ್ ಅಬ್ದುಲ್ ಹೈ ಫೀರೋಜ್ ಅವರು ಮಾತನಾಡಿ, ಭಾರತದ ತ್ರಿವರ್ಣ ಧ್ವಜದ ಮಹತ್ವವನ್ನು ವಿವರಿಸಿದರು. ಭಾರತದ ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ರಾಷ್ಟ್ರಧ್ವಜವು ದೇಶಭಕ್ತಿ, ಏಕತೆ ಮತ್ತು ತ್ಯಾಗದ ಪ್ರತೀಕವಾಗಿ ರೂಪುಗೊಂಡಿರುವುದನ್ನು ಸ್ಮರಿಸಿದರು. ರಾಷ್ಟ್ರಧ್ವಜದ ಗೌರವವನ್ನು ಪ್ರತಿಯೊಬ್ಬ ಭಾರತೀಯರೂ ಕಾಪಾಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕರಾದ ಕುಮಾರಿ ಶ್ರೀಲೇಖಾ, ಆಡಳಿತಾಧಿಕಾರಿಗಳಾದ ಶ್ರೀ ಅಬ್ದುಲ್ ವಾಕರ್, ಪ್ರಾಥಮಿಕ ಮತ್ತು ಪ್ರೌಢಶಾಲಾ ವಿಭಾಗದ ಮುಖ್ಯಗುರುಗಳಾದ ಶ್ರೀ ಎಂ.ಡಿ. ನೌಶಾದ್ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಶ್ರೀ ಖಾಜಾ ಬಂದೆನವಾಜ್ ಹಾಗೂ ಸಹ ಶಿಕ್ಷಕರಾದ ಶ್ರೀ ರಾಜೇಶ್ ನೆರವೇರಿಸಿದರು. ವಂದನಾರ್ಪಣೆಯನ್ನು ಸಹ ಶಿಕ್ಷಕರಾದ ಶ್ರೀ ಅಬ್ದುಲ್ ರಾಜಕ್ ಸಲ್ಲಿಸಿದರು.

ದೇಶಭಕ್ತಿ, ಶೈಕ್ಷಣಿಕ ಸಾಧನೆ ಹಾಗೂ ಸಾಂಸ್ಕೃತಿಕ ವೈವಿಧ್ಯತೆಯೊಂದಿಗೆ ನಡೆದ 80ನೇ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮವು ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಪಾಲಕರಲ್ಲಿ ರಾಷ್ಟ್ರಪ್ರೇಮದ ಭಾವನೆಯನ್ನು ಮತ್ತಷ್ಟು ಗಟ್ಟಿಗೊಳಿಸಿತು.

## ನೇಮಕಾತಿ ಪ್ರಕಟಣೆ

**ಕರ್ನಾಟಕ ಕಂದಾಯ ಇಲಾಖೆ ನೇಮಕಾತಿ 2026 – 572 ಗ್ರಾಮ ಆಡಳಿತ ಅಧಿಕಾರಿ (VAO) ಹುದ್ದೆಗಳಿಗೆ ಅರ್ಜಿ ಸಲ್ಲಿಸಿ ಆಗಸ್ಟ್ 6, 2026**

ಕರ್ನಾಟಕ ಕಂದಾಯ ಇಲಾಖೆ ನೇಮಕಾತಿ 2026: 572 ಗ್ರಾಮ ಆಡಳಿತ ಅಧಿಕಾರಿ (VAO) ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆ. ಏಇಂ (ಕರ್ನಾಟಕ ಪರೀಕ್ಷಾ ಪ್ರಾಧಿಕಾರ) 2026ರ ಜುಲೈ 11 ರಂದು ಅಧಿಕೃತ ಅಧಿಸೂಚನೆಯನ್ನು ಬಿಡುಗಡೆ ಮಾಡಿದೆ. ಕನಿಷ್ಠ 12ನೇ ತರಗತಿ ಉತ್ತೀರ್ಣರಾಗಿರುವ ಆಸಕ್ತ ಅಭ್ಯರ್ಥಿಗಳು ಈ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದು. ಕರ್ನಾಟಕ ಕಂದಾಯ ಇಲಾಖೆಯಲ್ಲಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಮೂಲತಃ ಜುಲೈ 30, 2026 ರಂದು ಇದ್ದ ಕೊನೆಯ ದಿನಾಂಕವನ್ನು ಈಗ ಆಗಸ್ಟ್ 20, 2026 ರವರೆಗೆ ವಿಸ್ತರಿಸಲಾಗಿದೆ. ಅಧಿಕೃತ ವೆಬ್‌ಸೈಟ್: kandaya.karnataka.gov.in

## ಕಂದಕೂರದಲ್ಲಿ ಸಂಭ್ರಮದ 80ನೇ ಸ್ವಾತಂತ್ರ್ಯ ದಿನಾಚರಣೆ

❑ ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: ತಾಲೂಕಿನ ಕಂದಕೂರ ಗ್ರಾಮದಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾದ ಶರಣಬಸವ ಕುಷ್ಟಗಿ ಅವರು ಧ್ವಜಾರೋಹಣ ನೆರವೇರಿಸಿದರು.**



ಕಾರ್ಯಕ್ರಮದಲ್ಲಿ ಗ್ರಾಮದ ಹಿರಿಯರಾದ ಕಂದಕೂರಪ್ಪ ವಾಲ್ಮೀಕಿ, ಮಾರುತಿ ಹಲಗಿ, ಭೀಮಣ್ಣ ಬೀಜಕಲ್ಲ, ಜಗದೀಶ್ ಗು–ರಿಕಾರ, ಹನಮಂತಪ್ಪ ತಳವಾರ, ದೇವೇಂದ್ರಪ್ಪ ದೇವಲಾಪುರ, ಶರಣಪ್ಪ ಗೋಪಾಳಿ, ಚಂದ್ರಹಾಸ ಭಾವಿಕಟ್ಟಿ, ಯಮನಪ್ಪ ಗುಮಗೇರಿ, ಶರಣಪ್ಪ ತುಮರಾಗುಡ್ಡಿ, ಆಂಜನೇಯ ಹಾದಿಮನಿ, ರವಿ ಬಡಿಗೇರಿ, ಬಸವರಾಜ ತುಮರಗುದ್ದಿ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ಗ್ರಾಮದ ಪ್ರಾಥಮಿಕ ಶಾಲೆ, ಪ್ರೌಢಶಾಲೆ ಹಾಗೂ ಅಂಗನವಾಡಿ ಕೇಂದ್ರದ ಮಕ್ಕಳು ಮತ್ತು ಶಿಕ್ಷಕರು, ಗ್ರಾಮ ಪಂಚಾಯಿತಿಯ ಸರ್ವ ಸಿಬ್ಬಂದಿ ವರ್ಗ ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಸರ್ವ ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಸಿರುಗುಪ್ಪ / ಸಮೀಪದ ಶಾನವಾಸಪುರದಲ್ಲಿ 80 ನೇ ಸ್ವಾತಂತ್ರ್ಯ ದಿನಾಚರಣೆ ಆಚರಣೆ

❑ ನೈಜ್ಯ ದೆಸೆ ನ್ಯೂಸ್

**ಇಲ್ಲಿನ ಸರ್ಕಾರಿ ಹಿರಿಯ ಉರ್ದು ಪ್ರಾಥಮಿಕ ಶಾಲೆಯಲ್ಲಿ 80 ನೇ ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಧ್ವಜಾರೋಹಣ ನೆರವೇರಿಸಿ ಮಾತಾನಾಡಿದ .ಎಸ್ ಡಿ ಎಂ ಸಿ ಅಧ್ಯಕ್ಷರಾದ ಜೆ.ಹುಸೇನ್ ಅವರು ಮಾತನಾಡಿ ಸ್ವಾತಂತ್ರ್ಯ ಬಂದು 80 ವರ್ಷ ಆದರೂ ಸಹಿತ ನಮ್ಮ ಪಾಲಕರು ಖಾಸಗಿ ಶಾಲೆಯತ್ತ ಒಲವು ತೂರಿಸುತ್ತಿದು ನಿಜಕ್ಕೂ ಶೋಚನೀಯ ಸಂಗತಿ.**



ಸರ್ಕಾರಿ ಶಾಲೆಗಳಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ ನಿಡುವುದರ ಜೂತೆಗೆ . ಒಳ್ಳೆಯ ಊಟ.ಬಟ್ಟೆ. ಪುಸ್ತಕ. ನಿಡಲಾಗುತ್ತದೆ ಹಾಗಾಗಿ ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಸೇರಿಸುವುಧರ ಮುಖಾಂತರ ಸರ್ಕಾರಿ ಶಾಲೆಗಳ ಗೌರವ ಹೆಚ್ಚಿಸಬೇಕೆಂದು ಪಾಲಕರಲ್ಲಿ ಮನವಿ ಮಾಡಿದರು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಶಿಕ್ಷಕಿ.ರಫತ್ ನವಾಜ್. ಪರ್ವೀನ್ ನವಾಜ್.ಅನೀತ ಕ್ರಿಷ್ಣ . ಪರ್ವೀನ್ ನಜೀರ್.ಜ್ಯೋತಿ. ಮತ್ತು ಎಸ್ ಡಿ ಎಂ ಸಿ ಅಧ್ಯಕ್ಷರು ಸರ್ವ ಸದಸ್ಯರು. ಊರಿನ ಗುರು ಹಿರಿಯರು. ಈ ಕಾರ್ಯಕ್ರಮಕ್ಕೆ ಸಹಕಾರ ನೀಡಿದ. ಅಲ್ ಜಾಮಿಯಾ ಖಿದ್ ಮತ್ತು ಟ್ರಸ್ಟ್ (ರಿ) ಶಾನವಾಸಪುರ ಇನ್ನು ಉಪಸ್ಥಿತರಿದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ದೇಶದಲ್ಲಿ ಭ್ರಷ್ಟಾಚಾರ ರಹಿತ ಆಡಳಿತವಾದರೆ ದೇಶ ಬಲಿಷ್ಠವಾಗುತ್ತದೆ: ಶಾಸಕ ಬಾದರ್ಲಿ ಅಭಿಪ್ರಾಯ

## ವೇದಿಕೆ ಮೇಲೆ ತತ್ವ ಸಿದ್ಧಾಂತದ ಭಾಷಣ ಮಾಡಿದರೆ ಸಾಲದು, ಪ್ರಾಮಾಣಿಕ ರಾಜಕಾರಣ ಮಾಡಬೇಕು: ಶಾಸಕ ಹಂಪನಗೌಡ ಬಾದರ್ಲಿ

❑ ನೈಜ್ಯ ದೆಸೆ ನ್ಯೂಸ್

**ದೇಶವಿದ್ದರೆ ನಾವು ನೀವೆಲ್ಲರೂ, ಹೀಗಾಗಿ ದೇಶಕ್ಕಾಗಿ, ದೇಶ ಉಳಿವಿಗಾಗಿ, ಸಮೃದ್ಧಿಗಾಗಿ, ವೈಯಕ್ತಿಕ ಹಿತವನ್ನು ಬಯಸದೆ, ದೇಶದ ಸುರಕ್ಷತೆಗೆ ಹೆಚ್ಚು ಒತ್ತು ಕೊಟ್ಟಾಗ ಮಾತ್ರ ಸಂಪದ್ಭರಿತ ದೇಶವಾಗಿ ಮುಂದೆ ಬರಲು ಸಾಧ್ಯ ಈ ನಿಟ್ಟಿನಲ್ಲಿ ಗುರು ಹಿರಿಯರ ಮಾರ್ಗದರ್ಶನದಲ್ಲಿ ಇಂದಿನ ಯುವ ಪೀಳಿಗೆ ಕಾರ್ಯಪ್ರವೃತ್ತರಾಗಬೇಕು.**

ರಾಜಕಾರಣಿಗಳು ಮಾಡುವುದು ಹೊಲಸು ಕೆಲಸ ವೇದಿಕೆಯ ಮೇಲೆ ತತ್ವ ಸಿದ್ಧಾಂತ ಮೌಲ್ಯಾಧಾರಿತ ರಾಜಕಾರಣದ ಬಗ್ಗೆ ಭಾಷಣ ಮಾಡುವುದನ್ನು ಬಿಟ್ಟು, ಪ್ರಾಮಾಣಿಕವಾಗಿ ರಾಜ–ಕಾರಣ ಮಾಡಬೇಕು ಎಂದು ಶಾಸಕ ಹಂಪನಗೌಡ ಬಾದರ್ಲಿ ಇತ್ತೀಚಿನ ರಾಜಕೀಯ ರಾಜಕಾರಣಿಗಳ ಕುರಿತು ಬೇಸರವನ್ನು ವ್ಯಕ್ತಪಡಿಸಿ ಮಾತನಾಡಿದರು.

ನಗರದ ಕ್ರೀಂಡಾಂಗಣದಲ್ಲಿ ತಾಲೂಕು ಆಡಳಿತದಿಂದ ಹಮ್ಮಿಕೊಂಡಿದ್ದ 80ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನನ್ನನ್ನು ಸೇ–ರಿದಂತೆ ರಾಜಕಾರಣಿಗಳಿಗೆ ಬದ್ಧತೆ ಇಲ್ಲ,



ಭ್ರಷ್ಟಾಚಾರ ರಹಿತ ಆಡಳಿತದಿಂದ ಮಾತ್ರ ಭಾರತ ಆರ್ಥಿಕ ಬಲಿಷ್ಠ ಸದೃಢ ರಾಷ್ಟ್ರವಾಗಲು ಸಾಧ್ಯ. ಭಾರತ ಸಂಪದ್ಭರಿತವಾಗಿ ಸದೃಢವಾಗಿ ಬೆಳೆಯಬೇಕೆಂಬುದು ನಮ್ಮ ಹಿರಿಯರ ಕನಸಾಗಿತ್ತು.

ಹಿರಿಯರ ತ್ಯಾಗ ಬಲಿದಾನದಿಂದ ಸ್ವಾತಂತ್ರ್ಯ ಬಂದು ಇಂದಿಗೆ 80 ವರ್ಷವಾಗಿದೆ. ಆದರೆ ದೇಶ ಯಾವ ಮಟ್ಟಿಗೆ ಪ್ರಗತಿಯಾಗಬೇಕಾಗಿತ್ತು. ಅದು ಆಗದೆ ಇರುವುದು ನಮಗೆಲ್ಲರಿಗೂ ನೋವಾಗಿದೆ. ಭಾಷೆ, ಜಾತಿ, ಧರ್ಮ, ನೀರು, ಎಲ್ಲಾ ಅಂಗಗಳ ಸಂಪತ್ತಿನ ಬಗ್ಗೆ ಗೊಂದಲವಿಲ್ಲದೆ ಇರುವುದರಿಂದ




ಇತರೆ ದೇಶಗಳು ತುಂಬಾ ಮುಂದೆ ಹೋಗಿವೆ. ನಮ್ಮಲ್ಲಿ ಹಲವಾರು ಗೊಂದಲಗಳು ಇರುವುದ–ರಿಂದ ಭಾರತ ಮುಂದೆ ಬರಲು ಸಾಧ್ಯವಾಗುತ್ತಿಲ್ಲ. ಅಲ್ಲದೇ ಕಾರ್ಯಾಂಗ, ನ್ಯಾಯಾಂಗ, ಶಾಸಕಾಂಗ, ಮತ್ತು ಪತ್ರಿಕಾರಂಗ ಸೇರಿದಂತೆ ಎಲ್ಲಾ ಅಂಗಗಳಲ್ಲಿ ಸಾಕಷ್ಟು ಬದಲಾವಣೆ ಆಗಬೇಕು. ಕೃಷಿ, ನೀರಾವರಿ, ಶಿಕ್ಷಣ, ಆರ್ಥಿಕ ವಲಯ ಸೇ–ರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಬದಲಾವಣೆ ಆಗಬೇಕು. **ದೇಶದ ಆರ್ಥಿಕ ಸಂಪನ್ಮೂಲ ಕ್ರೋಢೀಕರಿಸಿದಾಗ ದೇಶದ ಆರ್ಥಿಕ ಬದಲಾವಣೆ ಸಾಧ್ಯ. ದೇಶ ಹಾಗೂ ರಾಜ್ಯಗಳಲ್ಲಿ ಭ್ರಷ್ಟಾಚಾರ ರಹಿತ ಆಡಳಿತ ಬರಬೇಕು ಕಾರ್ಪೊರೇಟ್ ಕಂಪೆನಿಗಳ ವ್ಯಾಪಾರ ವಹಿವಾಟಿನಲ್ಲಿ** **ದೇಶದ ಸಂಪತ್ತು ಹೋಗಿ, ದೇಶದ ಆರ್ಥಿಕತೆ ಕುಂಠಿತ ಗೊಳ್ಳುತ್ತಿದೆ. ರಾಜಕೀಯ ಪಕ್ಷಗಳು ರಾಜಕಾರಣಿಗಳು ಭ್ರಷ್ಟಾಚಾರದಲ್ಲಿ ಮುಳಗಿರುವುದರಿಂದ ದೇಶ ಮುಂದೆ ಬರುತ್ತಿಲ್ಲ. ವೇದಿಕೆಯ ಭಾಷಣದಲ್ಲಿ ವೇದ ಸಿದ್ಧಾಂತದ ಬಗ್ಗೆ ಮಾತನಾಡಿ, ಭ್ರಷ್ಟಾಚಾರ ಮಾಡುವುದು ನಮ್ಮಂತ ರಾಜಕಾರಣಿಗಳಿಗೆ ಕರಗತವಾಗಿದೆ ಇದಾಗಬಾರದು.**

ರಾಯಚೂರು ಜಿಲ್ಲೆಯ ಏಳನೇ ಮೈಲ್ ಕ್ಯಾಂಪ್ (ಹುಣಸೆಹಾಳ ಹುಡಾ)ದಿಂದ ಹಿಡಿದು ಸಿಂಧನೂರಿನ ತನಕ ಚತುಷ್ಪಥ ರಸ್ತೆಯ ಯೋಜನೆಗೆ 14 ಸಚಿವರ ವಿರೋಧವಿತ್ತು. ನಂತರ ನಾನು ಮುಂದಾಳತ್ವ ವಹಿಸಿ ಶಾಸಕರನ್ನು ಕರೆದುಕೊಂಡು ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಮನವೊಲಿಸಿ,1,636 ಕೋಟಿ ಅನುದಾನ ಮಂಜೂರು ಮಾಡಿಸಿ, ರಸ್ತೆ ಕಾಮಗಾ–ರಿಯನ್ನ ಮುಗಿಸಿ ಈಗ ಉದ್ಘಾಟನೆಯ ಹಂತಕ್ಕೆ ಬಂದಿದೆ. ಚತುಷ್ಪಥ ರಸ್ತೆಯನ್ನು ನೋಡಿದರೆ ರಾಷ್ಟ್ರೀಯ ಹೆದ್ದಾರಿ ಥರ ನಿರ್ಮಾಣವಾಗಿದೆ. ತಾಲೂಕು, ಜಿಲ್ಲೆಯ ಅಭಿವೃದ್ಧಿಗಾಗಿ ಸರ್ಕಾರದಿಂದ ಅನುದಾನವನ್ನು ತಂದು ಅಭಿವೃದ್ಧಿ ಮಾಡುತ್ತೇವೆ,

# ಜಾಲಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಅದ್ದೂರಿ 80ನೇ ಸ್ವಾತಂತ್ರ್ಯ ದಿನಾಚರಣೆ

❑ ನೈಜ್ಯ ದೆಸೆ ನ್ಯೂಸ್

**ದೇವದುರ್ಗ/ಜಾಲಹಳ್ಳಿ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತದಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅದ್ದೂರಿಯಾಗಿ ಆಚ–ರಿಸಲಾಯಿತು.**

ಕಾರ್ಯಕ್ರಮದಲ್ಲಿ ಸಹಕಾರ ಸಂಘದ ಅಧ್ಯಕ್ಷರಾದ ಗೋವಿಂದಪ್ಪ ಆಲಗೇರಿ ಅವರು ಧ್ವಜಾರೋಹಣ ನೆರವೇರಿಸಿದರು. ಶಾಲಾ ಮಕ್ಕಳು ರಾಷ್ಟ್ರಗೀತೆ ಹಾಡುವ ಮೂಲಕ ಧ್ವಜಾರೋಹಣ ಕಾರ್ಯಕ್ರಮಕ್ಕೆ ಗೌರವ ಸಲ್ಲಿಸಿದರು. ಸಹಕಾರ ಸಂಘದ ಕಾರ್ಯದರ್ಶಿ ಶರಣು ಅವರು ಧ್ವಜಾರೋಹಣ ಕಾರ್ಯಕ್ರಮದ ವ್ಯವಸ್ಥೆಯನ್ನು ಮಾಡಿದರು.

ಈ ಸಂದರ್ಭದಲ್ಲಿ ಸಹಕಾರ ಸಂಘದ ನಿರ್ದೇಶಕರಾದ ನವೀನ್ ಪಾಟೀಲ್, ಗಿರೀಶ್




ಪಾಟೀಲ್, ಈಶಣ್ಣ ಕಾಟಮಲ್ಲಿ, ವೆಂಕಣ್ಣ ಯೆರಕಮಟ್ಟಿ, ಬಸವರಾಜ್ ರಾಂಪಾಳಿ, ವೆಂಕುಬ ಪೂಜಾರಿ ಹಾಗೂ ಶಿವು ವಿಭೂತಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಮಾಜಿ ನಿರ್ದೇಶಕರು ಹಾಗೂ ಗ್ರಾಮದ ಹಿರಿಯರಾದ ವೀರಣ್ಣ ಬಳೆ ಸೌಕಾರ್, ಶಶಿಕಾಂತ್ ಪಾಟೀಲ್, ಕೇರಲಿಂಗಪ್ಪ ನಾಡಗೌಡ, ರಾಘವೇಂದ್ರ ಕೊಲ್ಕರ್ ವಕೀಲರು, ಅಯ್ಯಪ್ಪ ಹೇರುಂಡಿ, ಶರಣಪ್ಪ, ವಿಠೋಬ ನಾಯಕ್ (ನಿವೃತ್ತ ಶಿಕ್ಷಕರು), ಬಸವರಾಜ್ ಪಾಣಿ, ಬಸವರಾಜ್ ದೊಡ್ಡಹಳ್ಳಿ, ಶಂಕರ್ ಗೌಡ ಮಾಲಿಪಾಟೀಲ್, ಭೀಮಣ್ಣ ಗುಮೇಧಾರ್, ರಂಗಣ್ಣ ಕೊಲ್ಕರ್, ಬುಡ್ಡಪ್ಪ ಕಾವಲಿ,ಸಿದ್ದಪ್ಪ ಹಂಪರಗುಂದಿ, ಭೀಮಣ್ಣ ಅಂಜಳ ಸೇರಿದಂತೆ

**ಜಾಲಹಳ್ಳಿ ಅಂಚೆ ಕಚೇರಿಯಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆ ಜಾಲಹಳ್ಳಿ ಗ್ರಾಮದ ಅಂಚೆ ಕಚೇರಿಯಲ್ಲಿಯೂ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲಾಯಿತು.**

ಮಾಜಿ ನಿರ್ದೇಶಕರು ಹಾಗೂ ಗ್ರಾಮದ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ದಿನಾಂಕ:15–08–2026 ಜಾಲಹಳ್ಳಿ ಅಂಚೆ ಕಚೇರಿಯ ಎಸ್‌ಪಿಎಂ ನಿಂಗಣ್ಣ ಹೈಯ್ಯಾಳ ಅವರು ಧ್ವಜಾರೋಹಣ ನೆರವೇರಿಸಿದರು. ಶಾಲಾ ಮಕ್ಕಳು ರಾಷ್ಟ್ರಗೀತೆ ಹಾಡುವ ಮೂಲಕ ಧ್ವಜಾರೋಹಣ ಕಾರ್ಯಕ್ರಮವನ್ನು ಪೂರ್ಣಗೊಳಿಸಿದರು ಈ ಸಂದರ್ಭದಲ್ಲಿ ಅಂಚೆ ಕಚೇರಿಯ ಸಿಬ್ಬಂದಿಗಳಾದ ವಿರೂಪಾಕ್ಷಪ್ಪ ಗೌಡ, ಮುರ್ತುಜಾ ಸಾಬ್, ಬಸವರಾಜ್, ನೀಲಾಂಬಿಕ, ಭೀಮಮ್ಮ, ವೈನಶ್ರೀ ಹಾಗೂ ಶಿವು ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.

# ತುಂಗಭದ್ರಾ ಎಡದಂಡೆ ಕಾಲುವೆಗೆ ರಾಜಾ ವೆಂಕಟಪ್ಪ ನಾಯಕ ಭೇಟಿ: ಕೆಳಭಾಗದ ರೈತರಿಗೆ ತಕ್ಷಣ ನೀರು ಹರಿಸಲು ಆಗ್ರಹ

❑ ನೈಜ್ಯ ದೆಸೆ ನ್ಯೂಸ್

**ಕವಿತಾಳ: ತುಂಗಭದ್ರಾ ಎಡದಂಡೆ ಮುಖ್ಯ ಕಾಲುವೆಯ ಮೈಲ್ 71 ಹಾಗೂ 66ರ ಕವಿತಾಳ ಸಮೀಪದ ಪ್ರದೇಶಗಳಿಗೆ ಮಾನ್ವಿ ವಿಧಾನಸಭಾ ಕ್ಷೇತ್ರದ ನಿಕಟಪೂರ್ವ ಶಾಸಕರಾದ ಶ್ರೀ ರಾಜಾ ವೆಂಕಟಪ್ಪ ನಾಯಕ ದೊರೆ ಅವರು ಇಂದು ಭೇಟಿ ನೀಡಿ, ಕಾಲುವೆಯಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳನ್ನು ಸ್ಥಳದಲ್ಲಿಯೇ ಪರಿಶೀಲಿಸಿದರು.**

ಕಾಲುವೆಯ ನೀರು ಹರಿಯುವಿಕೆ, ಕಾಮಗಾರಿಯ ಗುಣಮಟ್ಟ ಹಾಗೂ ಕೆಳಭಾಗದ ರೈತರಿಗೆ ನೀರು ತಲುಪುವ ವ್ಯವಸ್ಥೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ಈ ಸಂದರ್ಭದಲ್ಲಿ ಸ್ಥಳೀಯ ರೈತ ಮುಖಂಡರು ಹಾಗೂ ಸಾರ್ವಜನಿಕರೊಂದಿಗೆ ಚರ್ಚಿಸಿ, ರೈತರ ಸಮಸ್ಯೆಗಳನ್ನು ಆಲಿಸಿದರು. ನಂತರ ಮಾತನಾಡಿದ ರಾಜಾ ವೆಂಕಟಪ್ಪ ನಾಯಕ ದೊರೆ, ಸಿರವಾರ ಹಾಗೂ ಮಾನ್ವಿ ತಾಲ್ಲೂಕಿನ ಕೆಳಭಾಗದ ರೈತರು ಪ್ರಸಕ್ತ ವರ್ಷ ಮಳೆಯ ಕೊರತೆಯಿಂದ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಮಳೆ ಕೈಕೊಟ್ಟಿರುವುದ–ರಿಂದ ಬೆಳೆಗಳಿಗೆ ಅಗತ್ಯ ಪ್ರಮಾಣದ ನೀರು ದೊರೆಯದೆ ರೈತರು ಆತಂಕದಲ್ಲಿದ್ದಾರೆ. ಇಂತಹ ಸಂದರ್ಭದಲ್ಲಿ ಕಾಲುವೆ ನೀರು ರೈತರ ಪಾಲಿಗೆ ಅತ್ಯಂತ ಪ್ರಮುಖವಾಗಿದೆ ಎಂದು ಹೇಳಿದರು.

"ಐಸಿಸಿ ಸಭೆಯಲ್ಲಿ ಕೈಗೊಂಡಿರುವ ತೀರ್ಮಾನದಂತೆ ಕೆಳಭಾಗದ ರೈತ–ರಿಗೆ ಸಮರ್ಪಕವಾಗಿ ನೀರು ಹರಿಸಬೇಕು. ನೀರಿನ ಹಂಚಿಕೆಯಲ್ಲಿ ಯಾವುದೇ ರೀತಿಯ ತಾರತಮ್ಯ ಮಾಡಬಾರದು. ಕೆಳಭಾಗದ ರೈತ–ರಿಗೆ ಅವರ ಪಾಲಿನ ನೀರು ಸಕಾಲದಲ್ಲಿ ತಲುಪುವಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು" ಎಂದು ಅವರು ಒತ್ತಾಯಿಸಿದರು.

ತುಂಗಭದ್ರಾ ಎಡದಂಡೆ ಕಾಲುವೆಯನ್ನು ಅವಲಂಬಿಸಿರುವ ಸಾವಿರಾರು ರೈತರು ತಮ್ಮ ಬೆಳೆಗಳನ್ನು ಉಳಿಸಿಕೊಳ್ಳಲು ಕಾಲುವೆ ನೀರಿನ ಮೇಲೆ ಅವಲಂಬಿತರಾಗಿದ್ದಾರೆ. ಮಳೆ ಕೊರತೆಯ ಹಿನ್ನೆಲೆಯಲ್ಲಿ ಕಾಲುವೆ ನೀರು ಸಿಗದಿದ್ದರೆ ರೈತರು ಮತ್ತಷ್ಟು ಆರ್ಥಿಕ ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆ ಇದೆ. ಆದ್ದರಿಂದ ಸರ್ಕಾರ ಹಾಗೂ ನೀರಾವರಿ ಇಲಾಖೆ ರೈತರ ಪರಿಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಆಗ್ರಹಿಸಿದರು.

ರೈತರ ಹಿತ ಕಾಪಾಡದಿದ್ದರೆ ಹೋರಾಟದ ಎಚ್ಚರಿಕೆ ಕೆಳಭಾಗದ ರೈತರಿಗೆ ನೀರು ಹರಿಸುವಲ್ಲಿ ವಿಳಂಬವಾದರೆ ಅಥವಾ ಐಸಿಸಿ ಸಭೆಯ ತೀರ್ಮಾನವನ್ನು ಅನುಷ್ಠಾನಗೊಳಿಸದಿದ್ದರೆ ರೈತರೊಂದಿಗೆ ಸೇರಿ ಹೋರಾಟ ನಡೆಸುವುದಾಗಿ ರಾಜಾ ವೆಂಕಟಪ್ಪ ನಾಯಕ ದೊರೆ ಎಚ್ಚರಿಕೆ ನೀಡಿದರು. "ರೈತರ ಸಮಸ್ಯೆಯನ್ನು ಕಡೆಗಣಿಸಿದರೆ ನಾವು ಸುಮ್ಮನೆ ಕುಳಿತುಕೊಳ್ಳುವುದಿಲ್ಲ. ರೈತರ ಹಿತಕ್ಕಾಗಿ ಅವರೊಂದಿಗೆ ನಿಂತು ಹೋರಾಟ ನಡೆಸುತ್ತೇವೆ. ಅಗತ್ಯವಿದ್ದರೆ ಉಗ್ರ ಹೋರಾಟಕ್ಕೂ ಮುಂದಾಗಬೇಕಾಗುತ್ತದೆ" ಎಂದು ಅವರು ಸಂಬಂಧಪಟ್ಟ ಅಧಿಕಾ–ರಿಗಳು ಹಾಗೂ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಕಾಲುವೆಯ ನೀರಿನ ಹಂಚಿಕೆಯಲ್ಲಿ ಮೇಲ್ಭಾಗ ಮತ್ತು ಕೆಳಭಾಗದ ರೈತರಿಗೆ ಸಮಾನ ನ್ಯಾಯ ದೊರೆಯಬೇಕು. ಯಾವುದೇ ಪ್ರದೇಶದ ರೈತರಿಗೆ ಅನ್ಯಾಯವಾಗದಂತೆ ವೈಜ್ಞಾನಿಕ ಹಾಗೂ ನ್ಯಾಯಸಮ್ಮತ ರೀತಿಯಲ್ಲಿ ನೀರು ನಿರ್ವಹಣೆ ಮಾಡಬೇಕು ಎಂದು ಅವರು ಹೇಳಿದರು.

ಅಧಿಕಾರಿಗಳೊಂದಿಗೆ ಸ್ಥಳದಲ್ಲೇ ಚರ್ಚೆ ಸ್ಥಳ ಪರಿಶೀಲನೆಯ ಸಂದರ್ಭದಲ್ಲಿ ನೀರಾವರಿ



ಇಲಾಖೆಯ ಅಧಿಕಾರಿಗಳೊಂದಿಗೆ ಕಾಲುವೆಯ ಕಾಮಗಾರಿ ಹಾಗೂ ನೀರು ಹರಿಸುವ ವ್ಯವಸ್ಥೆಯ ಕುರಿತು ರಾಜಾ ವೆಂಕಟಪ್ಪ ನಾಯಕ ಅವರು ಚರ್ಚಿಸಿದರು. ಪೂರ್ಣಗೊಂಡಿರುವ ಕಾಮಗಾರಿಗಳ ನಿರ್ವಹಣೆ ಹಾಗೂ ಕಾಲುವೆ ಮೂಲಕ ನೀರು ಸಮರ್ಪಕವಾಗಿ ಕೆಳಭಾಗಕ್ಕೆ ತಲುಪುವಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ರೈತರ ಸಮಸ್ಯೆಗಳನ್ನು ಕೇವಲ ಕಚೇರಿ ಮಟ್ಟದಲ್ಲಿ ಚರ್ಚಿಸುವ ಬದಲು ಸ್ಥಳಕ್ಕೆ ಭೇಟಿ ನೀಡಿ ವಾಸ್ತವ ಪರಿಸ್ಥಿತಿಯನ್ನು ಪರಿಶೀಲಿಸಿ ಪರಿಹಾರ ಕಂಡುಕೊಳ್ಳಬೇಕು ಎಂದು ಅವರು ಹೇಳಿದರು.

ರೈತ ಮುಖಂಡರ ಉಪಸ್ಥಿತಿ ಈ ಸಂದರ್ಭದಲ್ಲಿ ರಾಜ್ಯ ಜೆಡಿಎಸ್ ಯುವ ಘಟಕದ ಉಪಾಧ್ಯಕ್ಷರಾದ ರಾಜಾ ರಾಮಚಂದ್ರ ನಾಯಕ, ಸಿರವಾರ ತಾಲೂಕು ಜೆಡಿ–ಎಸ್ ಅಧ್ಯಕ್ಷರಾದ ಮಲ್ಲಿಕಾರ್ಜುನ ಪಾಟೀಲ ಬಲ್ಲಟಗಿ, ಕಾರ್ಯನಿರ್ವಾಹಕ ಅಭಿಯಂತರರಾದ ಕೋದಂಡ ರಾಮಯ್ಯ, ಶರಣಪ್ಪ ಗೌಡ ಮದ್ಲಾಪುರ, ಖಾಜಾ ಪಾಷಾ ಬ್ಯಾಗ್ವಾಟ್, ಪಟ್ಟಣ ಪಂಚಾಯಿತಿ ಮಾಜಿ ಸದಸ್ಯರಾದ ಹನುಮಂತ ಬುಳ್ಳಾಪುರ, ರುಕ್ಕುಮುದ್ದೀನ್, ಸಣ್ಣ ಕಿರಿಲಿಂಗಪ್ಪ, ಶಶಿ ಸಾಹುಕಾರ, ರಾಜಶೇಖರ ಸಾಹುಕಾರ, ಶ್ರೀಕಾಂತ್ ಭೋವಿ, ಮುಸ್ತಫಾ ಒಂಟಿಬಂಡಿ, ರಾಮಚಾರಿ ಜಾಲಾಪುರ, ಶರಣಗೌಡ ಗವಿಗಟ್ಟ, ದಾನಪ್ಪ ಸಿರವಾರ, ರಂಜಿತಾ ಕುಮಾರ್, ಲಕ್ಷ್ಮಣ ಸಿರವಾರ, ಸೂಗೂರಯ್ಯ ಸ್ವಾಮಿ ಗಣದಿನ್ನಿ, ಗೋಪಾಲ ನಾಯಕ ಹರವಿ, ಬಸನಗೌಡ ಬೆಟ್ಟದೂರು, ಲಕ್ಷ್ಮಣ ಯಾದವ, ಶಿವುರಾಮ ರೆಡ್ಡಿ, ಜಯಕುಮಾರ ಮಾನವಿ, ಮಲ್ಲನಗೌಡ, ವಿಜಯ್, ಅಪ್ಪು ಸೇರಿದಂತೆ ಹಲವು ರೈತ ಮುಖಂಡರು ಹಾಗೂ ಸ್ಥಳೀಯರು ಉಪಸ್ಥಿತರಿದ್ದರು.

"ರೈತರ ಜಮೀನುಗಳಿಗೆ ನೀರು ತಲುಪುವವರೆಗೆ ಹೋರಾಟ ಮುಂದುವರಿಯಲಿದೆ" ಎಂಬ ಸಂದೇಶವನ್ನು ನೀಡುವ ಮೂಲಕ ರಾಜಾ ವೆಂಕಟಪ್ಪ ನಾಯಕ ದೊರೆ ಅವರು ಸರ್ಕಾರ ಮತ್ತು ನೀರಾವರಿ ಇಲಾಖೆಯ ಗಮನ ಸೆಳೆದರು.

# ಸಹನಾ ಇಂಗ್ಲಿಷ್ ಮೀಡಿಯಂ ಶಾಲೆಯಲ್ಲಿ ಅದ್ದೂರಿ ಸ್ವಾತಂತ್ರ್ಯೋತ್ಸವ

❑ ನೈಜ್ಯ ದೆಸೆ ನ್ಯೂಸ್

**ಮುದಗಲ್: ಮುದಗಲ್‌ನ ಸಹನಾ ಇಂಗ್ಲಿಷ್ ಮೀಡಿಯಂ ಶಾಲೆಯಲ್ಲಿ ಭಾರತದ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಸಂಭ್ರಮ, ಸಡಗರ ಹಾಗೂ ದೇಶಭಕ್ತಿಯ ವಾತಾವರಣದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು. ಶಾಲಾ ಆವರಣವು ರಾಷ್ಟ್ರಧ್ವಜಗಳು, ದೇಶಭಕ್ತಿ ಘೋಷಣೆಗಳು ಹಾಗೂ ವಿದ್ಯಾರ್ಥಿಗಳ ಉತ್ಸಾಹದಿಂದ ಕಂಗೊಳಿಸಿತು.**

ಕಾರ್ಯಕ್ರಮದ ಅಂಗವಾಗಿ ಶಾಲಾ ಆವರಣದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇ–ರಿಸಲಾಯಿತು. ನಂತರ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ರಾಷ್ಟ್ರಗೀತೆಯನ್ನು ಹಾಡಿ, ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟ ಸ್ವಾತಂತ್ರ್ಯ ಹೋರಾಟಗಾರ–ರಿಗೆ ಗೌರವ ನಮನ ಸಲ್ಲಿಸಿದರು.

ಸ್ವಾತಂತ್ರ್ಯೋತ್ಸವದ ಅಂಗವಾಗಿ ವಿದ್ಯಾರ್ಥಿಗಳಿಗಾಗಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ವಿದ್ಯಾರ್ಥಿಗಳು ದೇಶಭಕ್ತಿ ಗೀತೆಗಳನ್ನು ಹಾಡಿ, ಸ್ವಾತಂತ್ರ್ಯ



ಹೋರಾಟಗಾರರ ಜೀವನ ಮತ್ತು ತ್ಯಾಗವನ್ನು ಸ್ಮರಿಸುವ ಭಾಷಣಗಳನ್ನು ಮಾಡಿದರು. ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ದೇಶಭಕ್ತಿ ಪ್ರದರ್ಶನಗಳು ನೆರೆದಿದ್ದವರ ಗಮನ ಸೆಳೆದವು.

ವಿದ್ಯಾರ್ಥಿಗಳ ಭಾಷಣಗಳಲ್ಲಿ ಭಾರತದ ಸ್ವಾತಂತ್ರ್ಯ ಹೋರಾಟ, ಮಹಾತ್ಮ ಗಾಂಧೀಜಿ, ಭಗತ್ ಸಿಂಗ್, ರಾಣಿ ಲಕ್ಷ್ಮೀಬಾಯಿ, ಸುಭಾಷ್ ಚಂದ್ರ ಬೋಸ್ ಸೇರಿದಂತೆ ಅನೇಕ ಮಹನೀಯರ ತ್ಯಾಗ ಮತ್ತು ಹೋರಾಟವನ್ನು ಸ್ಮರಿಸಲಾಯಿತು. ದೇಶದ ಏಕತೆ, ಅಖಂಡತೆ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಕಾಪಾಡುವ ಅಗತ್ಯವನ್ನು ವಿದ್ಯಾರ್ಥಿಗಳು ತಮ್ಮ ಮಾತುಗಳ ಮೂಲಕ ಸಾರಿದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯ ಆದಿತ್ಯ ಮಾತನಾಡಿ, ಸ್ವಾತಂತ್ರ್ಯವು ನಮ್ಮ ಪೂರ್ವಜರ ಹೋರಾಟ ಮತ್ತು ತ್ಯಾಗದ ಫಲವಾಗಿದೆ. ಸ್ವಾತಂತ್ರ್ಯದ ನಿಜವಾದ ಅರ್ಥವನ್ನು ಅರಿತುಕೊಂಡು ಪ್ರತಿಯೊಬ್ಬರೂ ದೇಶದ ಅಭಿವೃದ್ಧಿಗೆ ತಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿ ನಿರ್ವಹಿಸಬೇಕು. ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಜವಾಬ್ದಾರಿಯುತ ನಾಗರಿಕರಾಗಿ ರೂಪುಗೊಳ್ಳಬೇಕು ಎಂದು ಕರೆ ನೀಡಿದರು.

ಶಿಕ್ಷಕಿಯರಾದ ಪ್ರಿಯಾಂಕ ಮತ್ತು ಸುಮಯ್ಯ ಮಾತನಾಡಿ, ಶಿಕ್ಷಣವು ಕೇವಲ ಉದ್ಯೋಗ ಪಡೆಯುವ ಸಾಧನವಲ್ಲ; ಉತ್ತಮ ವ್ಯಕ್ತಿತ್ವ ಹಾಗೂ ಜವಾಬ್ದಾರಿಯುತ ನಾಗರಿಕತ್ವವನ್ನು ರೂಪಿಸುವ ಶಕ್ತಿಯಾಗಿದೆ. ವಿದ್ಯಾರ್ಥಿಗಳು ಶಿಸ್ತು, ಪ್ರಾಮಾಣಿಕತೆ, ಸಮಯಪಾಲನೆ, ಮಾನವೀಯತೆ ಮತ್ತು ದೇಶಪ್ರೇಮವನ್ನು ಜೀವನದಲ್ಲಿ ಅಳವಡಿಸಿಕೊಂಡು ದೇಶದ ಭವಿಷ್ಯವನ್ನು ಉಜ್ವಲಗೊಳಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಾದ ಅದನಾನ್, ಆಫ್ರಿನ್, ರಾಕಿಬ್, ರೋಹನ್, ವೀರಸಂಗಮ, ಜಾರಾ, ಮಾನಸ, ವೈಷ್ಣವಿ, ಸನಾ, ಅಮನ್, ಅಲ್ಲಾಭಕ್ಷ್ ಹಾಗೂ ನಿಧಾ ಅವರು ಸ್ವಾತಂತ್ರ್ಯ ದಿನಾಚರಣೆಯ ಮಹತ್ವದ ಕು–ರಿತು ಉತ್ಸಾಹಭರಿತ ಭಾಷಣಗಳನ್ನು ಮಾಡಿದರು.

ವಿದ್ಯಾರ್ಥಿಗಳ ದೇಶಭಕ್ತಿ ಗೀತೆಗಳು ಹಾಗೂ ಸಾಂಸ್ಕೃತಿಕ ಪ್ರದರ್ಶನಗಳು ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿದ್ದವು. ಚಿಕ್ಕ ವಯಸ್ಸಿನಲ್ಲಿಯೇ ದೇಶದ ಇತಿಹಾಸ, ಸ್ವಾತಂತ್ರ್ಯ ಹೋರಾಟ ಹಾಗೂ ರಾಷ್ಟ್ರದ ಜವಾಬ್ದಾರಿಗಳ ಕುರಿತು ವಿದ್ಯಾರ್ಥಿಗಳು ಅರಿವು ಮೂಡಿಸಿಕೊಂಡಿರುವುದು ಕಾರ್ಯಕ್ರಮದಲ್ಲಿ ಕಂಡುಬಂದಿತು. ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕಿಯರಾದ ಪ್ರಿಯಾಂಕ, ಕವಿತಾ, ರಶ್ಮಿ, ಹೀನ ಬೇಗಂ ಹಾಗೂ ಸುಮಯ್ಯ ಸೇರಿದಂತೆ ಶಾಲೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಶಿಕ್ಷಕಿ ರಶ್ಮಿ ಅವರು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರೂಪಿಸಿದರು.

ಕಾರ್ಯಕ್ರಮದ ಅಂತ್ಯದಲ್ಲಿ ವಿದ್ಯಾರ್ಥಿಗಳಿಗೆ ಸಿಹಿ ವಿತರಿಸಲಾಯಿತು. ಶಿಕ್ಷಕರು ಹಾಗೂ ವಿದ್ಯಾರ್ಥಿಗಳ ಒಗ್ಗಟ್ಟಿನ ಪ್ರಯತ್ನದಿಂದ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮವು ಅರ್ಥಪೂರ್ಣವಾಗಿ ಹಾಗೂ ಯಶಸ್ವಿಯಾಗಿ ನೆರವೇ–ರಿತು. "ದೇಶ ಮೊದಲು, ದೇಶದ ಅಭಿವೃದ್ಧಿ ನಮ್ಮೆಲ್ಲರ ಹೊಣೆ" ಎಂಬ ಸಂದೇಶದೊಂದಿಗೆ ಕಾರ್ಯಕ್ರಮವು ಸಂಪನ್ನಗೊಂಡಿತು.

## ಶಿಕ್ಷಣ ಮಾರ್ಗದರ್ಶಿ


### ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ( JMC)

ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ (Journalism and Mass Communication) ಎನ್ನುವುದು ಮುದ್ರಣ, ದೃಶ್ಯ-ಶ್ರವಣ ಮತ್ತು ಡಿಜಿಟಲ್ ಮಾಧ್ಯಮಗಳ ಬಗ್ಗೆ ತಿಳಿಸಿಕೊಡುವ ಜನಪ್ರಿಯ ಕೋರ್ಸ್ ಆಗಿದೆ. ಇದು ವರದಿಗಾರಿಕೆ, ಸಂಪಾದನೆ, ಜಾಹೀರಾತು, ಸಾರ್ವಜನಿಕ ಸಂಪರ್ಕ ಮತ್ತು ಡಿಜಿಟಲ್ ಕಂಟೆಂಟ್ ರಚನೆಯನ್ನು ಕಲಿಸುತ್ತದೆ.ಪ್ರಮುಖ ಕೋರ್ಸ್ ವಿಧಗಳು ಮತ್ತು ಅವಧಿಬ್ಯಾಚುಲರ್ ಡಿಗ್ರಿ (BA / BJMC): ೩ ಅಥವಾ ೪ ವರ್ಷಗಳ ಪದವಿಪೂರ್ವ ಕೋರ್ಸ್. ವಿದ್ಯಾರ್ಥಿಗಳು ಪಿಯುಸಿ (೧೦+೨) ಮುಗಿಸಿರಬೇಕು.ಮಾಸ್ಟರ್ ಡಿಗ್ರಿ (MA / MJMC): ೨ ವರ್ಷಗಳ ಸ್ನಾತಕೋತ್ತರ ಕೋರ್ಸ್. ಯಾವುದೇ ಪದವಿ ಪೂರ್ಣಗೊಳಿಸಿದವರು ಅರ್ಹರು. ಡಿಪ್ಲೊಮಾ ಮತ್ತು ಪ್ರಮಾಣಪತ್ರ ಕೋರ್ಸ್‌ಗಳು: ೧ ವರ್ಷದ ಕಡಿಮೆ ಅವಧಿಯ ವೃತ್ತಿಪರ ಕೋರ್ಸ್‌ಗಳು ಲಭ್ಯವಿವೆ.ಕಲಿಯುವ ಮುಖ್ಯ ವಿಷಯಗಳುವರದಿಗಾರಿಕೆ ಮತ್ತು ಸುದ್ದಿ ಸಂಪಾದನೆ (Reporting and Editing) ಟಿವಿ, ರೇಡಿಯೋ ಮತ್ತು ಚಲನಚಿತ್ರ ನಿರ್ಮಾಣಡಿಜಿಟಲ್ ಮಾಧ್ಯಮ ಮತ್ತು ಸೋಷಿಯಲ್ ಮೀಡಿಯಾ ನಿರ್ವಹಣೆಜಾಹೀರಾತು (Advertising) ಮತ್ತು ಸಾರ್ವಜನಿಕ ಸಂಪರ್ಕ (Public Relations)ಮಾಧ್ಯಮ ಕಾನೂನು ಮತ್ತು ನೈತಿಕತೆ (Media Laws and Ethics) ಉದ್ಯೋಗ ಅವಕಾಶಗಳುಸುದ್ದಿ ವರದಿಗಾರ ಅಥವಾ ಪತ್ರಕರ್ತ (News Reporter / Journalist)ಸುದ್ದಿ ಸಂಪಾದಕ (Editor)ಕಂಟೆಂಟ್ ರೈಟರ್ ಅಥವಾ ಡಿಜಿಟಲ್ ಮಾರ್ಕೆಟರ್ಸಾರ್ವಜನಿಕ ಸಂಪರ್ಕ ಅಧಿಕಾರಿ (PR Executive)ಕ್ಯಾಮೆರಾಮನ್, ರೇಡಿಯೋ ಜಾಕಿ (RJ) ಅಥವಾ ನಿರೂಪಕ..

## ಕರುನಾಡು ಸಾರಥಿ ಶಂಕರನಾಗ ಮಿನಿಗೂಡ್ಸ್ ಚಾಲಕರ ಸಂಘದ ವತಿಯಿಂದನಾಡಪ್ರಭು ಕೆಂಪೇಗೌಡ ರಾಜ್ಯ ಪ್ರಶಸ್ತಿ ಪುರಸ್ಕೃತ ನಿಂಗಪ್ಪ ಜಿಗೇರಿ ಅವರಿಗೆ ಸನ್ಮಾನ

ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: 80ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಕರುನಾಡು ಸಾರಥಿ ಶಂಕರನಾಗ ಮಿನಿಗೂಡ್ಸ್ ಚಾಲಕರ ಸಂಘದ ವತಿಯಿಂದ ಕೃಷಿ ಕ್ಷೇತ್ರದಲ್ಲಿ ಸಾಧನೆಗೈದು ನಾಡಪ್ರಭು ಕೆಂಪೇಗೌಡ ರಾಜ್ಯ ಪ್ರಶಸ್ತಿ ಪಡೆದಿರುವ ನಿಂಗಪ್ಪ ವೀ. ಜಿಗೇರಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.



ನಿಂಗಪ್ಪ ವೀ. ಜಿಗೇರಿ ಅವರು ಕೃಷಿ ಕ್ಷೇತ್ರದಲ್ಲಿ ಮಾಡಿರುವ ಸಾಧನೆ ಹಾಗೂ ರಾಜ್ಯ ಪ್ರಶಸ್ತಿ ಪಡೆದಿರುವುದಕ್ಕೆ ಸಂಘದ ಪದಾಧಿಕಾರಿಗಳು ಅಭಿನಂದನೆ ಸಲ್ಲಿಸಿ, ಅವರ ಸಾಧನೆ ಇತರರಿಗೆ ಪ್ರೇರಣೆಯಾಗಲಿ ಎಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಮೈಲಾರಗೌಡ ಪೊಲೀಸ್ ಪಾಟೀಲ್, ಮಂಜು ಪೊಲೀಸ್ ಪಾಟೀಲ್, ಬಸವರಾಜ ಅರಳಲಿಮಠ, ನಾರಾಯಣಿ ಗೊಂದಲೆ, ಚನ್ನಪ್ಪ ಗಾದಾರಿ, ಅಡಿವೆಪ್ಪ ಕಂಚಿ, ನಿಂಗರಾಜ ಪೊಲೀಸ್ ಪಾಟೀಲ್, ಅಶೋಕ ಜೋಗೇರ, ಬಸವರಾಜ ಬಳಿಗಾರ, ಮಂಜುನಾಥ ಹೊಸಕೇರಿ, ಅಜ್ಜಪ್ಪ ಹುಲಿ, ಕುಮಾರ, ಪರಶುರಾಮ ಗಾಣದಾಳ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಜಾಲಹಳ್ಳಿಯ ಉರ್ದು ಶಾಲೆಯಲ್ಲಿ ಅದ್ದೂರಿ 80ನೇ ಸ್ವಾತಂತ್ರ್ಯ ದಿನಾಚರಣೆ

ನೈಜ್ಯ ದೆಸೆ ನ್ಯೂಸ್

ದೇವದುರ್ಗ/ಜಾಲಹಳ್ಳಿ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮದ ಉರ್ದು ಶಾಲೆಯಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಸಂಭ್ರಮ ಹಾಗೂ ಅದ್ದೂರಿಯಾಗಿ ಆಚರಿಸಲಾಯಿತು.

ಬೆಳಗ್ಗೆ ನಡೆದ ಧ್ವಜಾರೋಹಣ ಕಾರ್ಯಕ್ರಮವನ್ನು ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರಾದ ನೂರುಲ್ ಹುಸೇನ್ ಆರತಿ ಹಾಗೂ ಶಾಲೆಯ ಮುಖ್ಯೋಪಾಧ್ಯಾಯರಾದ ಇಬ್ರಾಹಿಂ ಅವರು ನೆರವೇರಿಸಿದರು. ಈ ಸಂದರ್ಭದಲ್ಲಿ ಶಾಲೆಯ ವಿದ್ಯಾರ್ಥಿಗಳು ರಾಷ್ಟ್ರಗೀತೆ ಹಾಡುವ ಮೂಲಕ ಧ್ವಜಾರೋಹಣ ಕಾರ್ಯಕ್ರಮಕ್ಕೆ ಗೌರವ ಸಲ್ಲಿಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ರಾಜ ವಾಸುದೇವ ನಾಯಕ, ವಕೀಲರು ಮಾತನಾಡಿ, ಸ್ವಾತಂತ್ರ್ಯ ದಿನಾಚರಣೆ ಇಡೀ ದೇಶದ ಹಬ್ಬವಾಗಿದೆ. ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ ಮಹಾನ್ ದೇಶಭಕ್ತರು ಹಾಗೂ ಸ್ವಾತಂತ್ರ್ಯ ಹೋರಾಟಗಾರರ



ತ್ಯಾಗ-ಬಲಿದಾನಗಳನ್ನು ಸದಾ ಸ್ಮರಿಸಬೇಕು ಎಂದು ಹೇಳಿದರು. ಇದೇ ವೇಳೆ ಶಾಲೆಯಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕಡಿಮೆಯಾಗಿರುವುದು ಗಮನಕ್ಕೆ ಬರುತ್ತಿದ್ದು, ಮಕ್ಕಳ ದಾಖಲಾತಿ ಹೆಚ್ಚಿಸಲು ಎಸ್‌ಡಿಎಂಸಿ ಸದಸ್ಯರು ಹಾಗೂ ಶಿಕ್ಷಕರು ಹೆಚ್ಚಿನ ಪ್ರಯತ್ನ ಮಾಡಬೇಕು ಎಂದು ಸಲಹೆ ನೀಡಿದರು.

ಗ್ರಾಮ ಪಂಚಾಯಿತಿ ಸದಸ್ಯರಾದ ಅಬ್ದುಲ್ ರೆಹಮಾನ್ ಖುರೇಷಿ ಮಾತನಾಡಿ, ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹಾತ್ಮ ಗಾಂಧೀಜಿ, ಸುಭಾಷ್ ಚಂದ್ರ ಬೋಸ್, ಮೌಲಾನಾ ಅಬುಲ್ ಕಲಾಂ ಆಜಾದ್, ಖಾನ್ ಅಬ್ದುಲ್ ಗಫಾರ್ ಖಾನ್ ಹಾಗೂ ಮೇಜರ್ ಅಬ್ದುಲ್ ಹಮೀದ್ ಅವರ ದೇಶಭಕ್ತಿ, ತ್ಯಾಗ ಮತ್ತು ಬಲಿದಾನಗಳನ್ನು ಸ್ಮರಿಸಿದರು. ಸ್ವಾತಂತ್ರ್ಯ ಹೋರಾಟಗಾರರ ಆದರ್ಶಗಳನ್ನು ಇಂದಿನ ಯುವ ಪೀಳಿಗೆ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಾಜ ವಾಸುದೇವ ನಾಯಕ, ವಕೀಲರು, ಬಾಬಾ ಮೆಡಿಕಲ್, ಗ್ರಾಮ ಪಂಚಾಯಿತಿ ಸದಸ್ಯ ಅಬ್ದುಲ್ ರೆಹಮಾನ್ ಖುರೇಷಿ, ಇಮಾಂಸಾಬ್ ಉದ್ದಾರ, ಜಾಕಿರ್ ಹುಸೇನ್ ಆರತಿ, ಕಲೀಮ್ ಉದ್ದಾರ,

ಮುಖಂಡರಾದ ಬಾಬಾ ಮೆಡಿಕಲ್ ಮಾತನಾಡಿ, ಸರ್ಕಾರದಿಂದ ಹೊಸ ಶಾಲಾ ಕಟ್ಟಡಗಳ ನಿರ್ಮಾಣಕ್ಕೆ ಅವಕಾಶಗಳು ದೊರೆಯುತ್ತಿರುವ ಹಿನ್ನೆಲೆಯಲ್ಲಿ ಎಸ್‌ಡಿಎಂಸಿ ಸದಸ್ಯರು ಕೂಡಲೇ ಸೂಕ್ತ ಸ್ಥಳವನ್ನು ಗುರುತಿಸಿ, ನೂತನ ಜಾಗದಲ್ಲಿ ಉರ್ದು ಶಾಲೆಯ ಕಟ್ಟಡ ನಿರ್ಮಾಣಕ್ಕೆ ಪ್ರಯತ್ನಿಸಬೇಕು ಎಂದು ಹೇಳಿದರು. ಪ್ರಸ್ತುತ ಶಾಲೆಯ ಕಟ್ಟಡ ಹಳೆಯದಾಗಿದ್ದು, ಜಾಮಿಯಾ ಮಸೀದಿಗೆ ಸೇರಿದ ಜಾಗದಲ್ಲಿರುವ ಹಿನ್ನೆಲೆಯಲ್ಲಿ, ಹೊಸ ಸ್ಥಳದಲ್ಲಿ ಸುಸಜ್ಜಿತ ಶಾಲಾ ಕಟ್ಟಡ ನಿರ್ಮಿಸಲು ಊರಿನ ಎಲ್ಲರೂ ಒಗ್ಗಟ್ಟಿನಿಂದ ಪ್ರಯತ್ನಿಸಬೇಕು ಎಂದು ಕರೆ ನೀಡಿದರು.

ಮಹಿಬೂಬ್ ಪರಾಶಿ, ಮುಸ್ತಫಾ ಯಾದಗೀರ್, ಮೌಲಾನಾ ಮುಮ್ತಾಜ್ ರಹೀ, ಮೌಲಾನಾ ಅಶ್ರಫ್, ಜಾಕಿರ್ ಗುಂಡುಗುರ್ತಿ, ಖಾದರ್ ಬಾಷಾ ಸಾಲಗುಂದ, ಅಶಫಾಕ್ ಮುಲ್ಲಾ, ಬಾಬಾ ಸಿತಾರ, ಕಾಸಿಂ ಅಲಿ ಸರ್ನೋಬತ್, ಶಾಲೆಯ ಎಸ್‌ಡಿಎಂಸಿ ಸದಸ್ಯರಾದ ಜಹೀರುದ್ದೀನ್ ದರವೇಶ್ ಸೇರಿದಂತೆ ಊರಿನ ಪ್ರಮುಖರು, ಸಾರ್ವಜನಿಕರು, ಶಿಕ್ಷಕರು ಹಾಗೂ ಶಾಲಾ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಕುನ್ನಟಗಿ ಯಲ್ಲಿ ಅತ್ಯಂತ ವಿಜ್ರಂಭಣೆಯಿಂದ ಧ್ವಜಾರೋಹಣ ನೆರವೇರಿಸಿದ ಖಆಒಆ ಅಧ್ಯಕ್ಷರಾದ ರಮೇಶ ಕೆ

ನೈಜ್ಯ ದೆಸೆ ನ್ಯೂಸ್

ಮಸ್ಕಿ: 80ನೇ ಸ್ವಾತಂತ್ರ?ಯೋತ್ಸವದ ಅಂಗವಾಗಿ ಮಸ್ಕಿ ನಗರ ಯೋಜನಾ ಪ್ರಾಧಿಕಾರದ ಕಚೇರಿಯಲ್ಲಿ ಅಧ್ಯಕ್ಷ ಆರ್. ಸಿದ್ದನಗೌಡ ತುರವಿಹಾಳ ಅವರು ಧ್ವಜಾರೋಹಣ ನೆರವೇರಿಸಿ, ರಾಷ್ಟ್ರಧ್ವಜಕ್ಕೆ ಗೌರವ ಸಲ್ಲಿಸಿದರು.

ನಂತರ ಮಾತನಾಡಿದ ಅವರು,ಸ್ವಾತಂತ್ರ ಯಕ್ಕಾಗಿ ಹೋರಾಡಿದ ಮಹನೀಯರ ತ್ಯಾಗ, ಬಲಿದಾನ ಹಾಗೂ ದೇಶಭಕ್ತಿಯನ್ನು ಸ್ಮರಿಸುವುದು ಪ್ರತಿಯೊಬ್ಬ




ನಾಗರಿಕನ ಕರ್ತವ್ಯವಾಗಿದೆ. ಸ್ವಾತಂತ್ರ?ಯದ ಮೌಲ್ಯಗಳನ್ನು ಕಾಪಾಡಿಕೊಂಡು ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಹೇಳಿದರು. ಪಟ್ಟಣದ ಸಮಗ್ರ ಹಾಗೂ ವ್ಯವಸ್ಥಿತ ಅಭಿವೃದ್ಧಿಯಲ್ಲಿ ನಗರ ಯೋಜನಾ ಪ್ರಾಧಿಕಾರಗಳ ಪಾತ್ರ ಮಹತ್ವದ್ದಾಗಿದೆ. ಮಸ್ಕಿ ಪಟ್ಟಣದ ಅಭಿವೃದ್ಧಿಗೆ ಅಗತ್ಯವಾದ ಯೋಜನೆಗಳನ್ನು ರೂಪಿಸಿ, ಸಾರ್ವಜನಿಕರಿಗೆ ಉತ್ತಮ ಮೂಲಸೌಕರ್ಯ ಹಾಗೂ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಪ್ರಾಧಿಕಾರವು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲಿದೆ ಎಂದು ಅವರು ತಿಳಿಸಿದರು. ಧ್ವಜಾರೋಹಣದ ಬಳಿಕ ರಾಷ್ಟ್ರಗೀತೆ ಹಾಡಲಾಯಿತು.

ಈ ಸಂದರ್ಭದಲ್ಲಿ ತಿಡಿಗೊಳ ಜಿಲ್ಲಾ ಪಂಚಾಯತಿ ಮಾಜಿ ಸದಸ್ಯೆ ರೂಪ ಸಿದ್ದನಗೌಡ, ಪುರಸಭೆ ಮುಖ್ಯಾಧಿಕಾರಿ ನರಸರಡ್ಡಿ, ನಿಸ್ಸಾರ, ಗಂಗಾಧರ ಮುರಾರಿ, ನಾಗಭೂಷಣ, ಮಲ್ಲಯ್ಯ ಮುರಾರಿ, ಮಲ್ಲಿಕ್ ಮುರಾರಿ, ವೆಂಕೋಬ ಕಣ್ಣೂರು, ಸೇರಿದಂತೆ ಪ್ರಾಧಿಕಾರದ ಸಿಬ್ಬಂದಿಗಳೂ ಉಪಸ್ಥಿತರಿದ್ದರು.

## ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಕುನ್ನಟಗಿ ಯಲ್ಲಿ ಅತ್ಯಂತ ವಿಜ್ರಂಭಣೆಯಿಂದ ಧ್ವಜಾರೋಹಣ ನೆರವೇರಿಸಿದ ಖಆಒಆ ಅಧ್ಯಕ್ಷರಾದ ರಮೇಶ ಕೆ

ನೈಜ್ಯ ದೆಸೆ ನ್ಯೂಸ್

80ನೇ ಸ್ವಾತಂತ್ರ್ಯ ದಿನಾಚರಣೆಯು ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಕುನ್ನಟಗಿ ಯಲ್ಲಿ ಅತ್ಯಂತ ವಿಜ್ರಂಭಣೆಯಿಂದ ಆಚರಿಸಿದರು ಧ್ವಜಾರೋಹಣವನ್ನು ಖಆಒಆ ಅಧ್ಯಕ್ಷರಾದ ರಮೇಶ ಕುನ್ನಟಗಿಯವರು ನೆರವೇರಿಸಿ ಮಾತನಾಡಿದ ಅವರು ದೇಶಭಕ್ತಿ ಗೀತೆಗಳು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ದೇಶದ ಸ್ವಾತಂತ್ರ್ಯವನ್ನು ಗೌರವಿಸುವುದು ನಮ್ಮೆಲ್ಲರ ಕರ್ತವ್ಯ ದೇಶದ ಪ್ರಗತಿಗೆ ಕೈ ಜೋಡಿಸುವುದು ನಮ್ಮ ಹೊಣೆ ಹಾಗೂ ಶಾಲೆಯ ಅಭಿರುದ್ಧಿಗೆ ನಾನು ಮುಂಚೂಣಿಯಲ್ಲಿ ಇರುತ್ತೇನೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಉಮೇಶ್ ಗೌಡ ಕ. ರ. ವೇ ಕನ್ನಡ ಸೇನೆ ರಾಜ್ಯ ಕಾರ್ಯದರ್ಶಿ ಶಾಲೆಯ ಅಂದಚೆಂದಕ್ಕೆ ಬಣ್ಣದ ಬಾಕ್ಸ್ ಗಳನ್ನು ನೀಡಿದರು.ಸರ್ಕಾರಿ ಶಾಲೆಗಳು ಉಳಿವಿಗಾಗಿ ಸೇವೆ ಸಲ್ಲಿಸಲು ನಾನು ಸದಾ ಸಿದ್ದನಿದ್ದೇನೆಂದು ಅಭಿಪ್ರಾಯಿಸಿದರು.

ಶಾಲೆಯ ಶಿಕ್ಷಕರಾದ ಸುದರ್ಶನ್ ಟಿ ಮಾತನಾಡಿ ಪ್ರತಿಯೊಬ್ಬ ಮಕ್ಕಳಲ್ಲಿಯೂ ದೇಶಪ್ರೇಮ ಸಹೋದರತ್ವ ಮತ್ತು ರಾಷ್ಟ್ರದ ಬಗ್ಗೆ ಹೆಮ್ಮೆಯ ಭಾವನೆಗಳನ್ನು ಮಕ್ಕಳಲ್ಲಿ ಬೆಳಸುತ್ತೇವೆ ಎಂದು ತಿಳಿಸಿದರು ವಿವಿಧ ಸಾಂಸ್ಕೃತಿಕ ಮತ್ತು ಕ್ರೀಡಾಕೂಟದಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನಗಳನ್ನು ನೀಡಿದರು ಕಾರ್ಯಕ್ರಮದಲ್ಲಿ ದವಲಸಾಬ್ ದೊಡ್ಡಮನಿ ರಾಘವೇಂದ್ರ ಸಿದ್ರಾಮೇಶ್ವರ ಕ.ರಾ. ವೇ ಕನ್ನಡ ಸೇನೆ ಮತ್ತು ಶಾಲಾ



ಖಆಒಆ ಸದಸ್ಯರು ಊರಿನ ಹಿರಿಯರು, ಶಿಕ್ಷಣ ಪ್ರೇಮಿಗಳು, ಪರಿಸರ ಪ್ರೇಮಿಗಳು, ಮತ್ತು ಮುಖ್ಯಗುರುಗಳಾದ ಕೇಶನಗೌಡ, ಜ್ಯೋತಿ ಕ, ಶ್ರೀಕಾಂತ್ ಪಾಟೀಲ್, ಶಾಂತಾಬಾಯಿ ಅಂಬಿಕಾ ಮತ್ತು ಮುದ್ದು ಮಕ್ಕಳು ಇದ್ದರು

# ರಜಪೂತ ಅಭಿವೃದ್ಧಿ ಮಂಡಳಿ ಸ್ಥಾಪನೆಗೆ ಆಗ್ರಹಿಸಿ ಮನವಿ

ನೈಜ್ಯ ದೆಸೆ ನ್ಯೂಸ್

ಕವಿತಾಳ: ಪಟ್ಟಣದ ರಜಪೂತ ಯುವಕ ಮಂಡಳಿ (ರಿ)ಯ ಪದಾಧಿಕಾರಿಗಳು ಇಂದು ರಾಜ್ಯದಲ್ಲಿ ಶೈಕ್ಷಣಿಕ, ಆರ್ಥಿಕ ಹಾಗೂ ಸಾಮಾಜಿಕವಾಘಿ ಹಿಂದುಳಿದಿರುವ ರಜಪೂತ ಸಮಾಜದ ಸಮಗ್ರ ಏಳಿಗೆಗಾಗಿ ರಜಪೂತ ಅಭಿವೃದ್ಧಿ ಮಂಡಳಿ ಸ್ಥಾಪಿಸುವಂತೆ ಆಗ್ರಹಿಸಿ ಮುಖ್ಯಮಂತ್ರಿಗಳಿಗೆ ಬರೆದಿರುವ ಮನವಿ ಪತ್ರವನ್ನು ನಾಡಯಹಸೀಲ್ದಾರರ ಮೂಲಕ ಸಲ್ಲಿಸಲಾಯಿತು.

ನಂತರ ಮಾತನಾಡಿದ ಪದಾಧಿಕಾರಿಗಳು 'ರಾಜ್ಯದಲ್ಲಿ ಕಲ್ಪಾಂತರ ಜನಸಂಖ್ಯೆ ಹೊಂದಿರುವ ರಜಪೂತ ಸಮಾಜವೂ ಶೈಕ್ಷಣಿಕ, ಆರ್ಥಿಕ ಹಾಗೂ ಉದ್ಯೋಗ ಕ್ಷೇತ್ರದಲ್ಲಿ ತೀರ್ವವಾಗಿ ಹಿಂದುಳಿದಿದೆ, ನಮ್ಮ



ಯುವಜನತೆಗೆ ಸೂಕ್ತ ಪ್ರೋತ್ಸಾಹ ಮತ್ತು ಮಾರ್ಗದರ್ಶನ ಸಿಗದೆ ಸಮಾಜವೂ ಇಂದಿಗೂ ಮುಖ್ಯವಾಹಿನಿಗೆ ಬರಲು ಸಾದ್ಯವಾಗುತ್ತಿಲ್ಲೆಂದಯ ಕಳವಳ ವ್ಯಕ್ತಪಡಿಸಿದರು.ಇದೇ ವಿಷಯವಾಗಿ ಈಗಾಗಲೇ ಕಲಬುರ್ಗಿ ಜಿಲ್ಲಾಡಳಿತದ ಉಸ್ತುವಾರಿಯಲ್ಲಿ ರಜಪೂತ ಸಮಾಜದ ಕೌಟುಂಬಿಕ ಸಮೀಕ್ಷೆಹಾಗೂ ಡಿಜಿಟಲ್ ನೊಂದಣಿ ಪ್ರಕ್ರಿಯೆ ಅತ್ಯಂತ ಯಶಸ್ವಿಯಾಗಿ ನಡೆದಿದೆ, ಈಸಮಗ್ರ ದತ್ತಾಂಶಗಳ ವರದಿಯೂ ಬೆಂಗಳೂರಿನಲ್ಲಿರುವ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಆಯೋಗದ ಪರಿಶೀಲನೆಯಲ್ಲಿದೆ.

ಈ ಮಹತ್ವದ ಅಭಿಯಾನದ ಮೂಲಕ ಇಡೀ ರಾಜ್ಯದ ರಜಪೂತ ಸಮಾಜದ ಬಂಧುಗಳು ಒಗ್ಗೂಡುತ್ತಿದ್ದು ,ಸರ್ಕಾರ ತಕ್ಷಣವೆ ಸ್ಪಂದಿಸಿ ಸಮಾಜದ ಕಲ್ಯಾಣಕ್ಕಾಗಿ ಅಭಿವೃದ್ಧಿ ಮಂಡಳಿ ಸ್ಥಾಪಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ ಎಂದು ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ರಜಪುತ ಯುವಕ ಮಂದಳಿಯ ಅಧ್ಯಕ್ಷ ಆನಂದ್ ಸಿಂಗ್ ದಡೇದರ್,ಉಪಾಧ್ಯಕ್ಷ ಸಂಜೀವ ಸಿಂಗ್, ಪ್ರಧಾನ ಕಾರ್ಯದರ್ಶಿ ಕಿರಣ್ ಸಿಂಗ್ ಸೇರಿದಂತೆ ಸಮಾಜದ ಹಿರಿಯರು ಉಪಸ್ಥಿತರಿದ್ದರು.

# ಬಳಗಾನೂರಿನ ಶ್ರೀ ಬಸವೇಶ್ವರ ಸಂಯುಕ್ತ ಪ್ರೌಢಶಾಲೆಯಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆ ಸಂಭ್ರಮ

ನೈಜ್ಯ ದೆಸೆ ನ್ಯೂಸ್

ಬಳಗಾನೂರು: ಬಳಗಾನೂರಿನ ಪ್ರತಿಷ್ಠಿತ ಶ್ರೀ ಬಸವೇಶ್ವರ ಸಂಯುಕ್ತ ಪ್ರೌಢಶಾಲೆಯಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಸಂಭ್ರಮ, ಸಡಗರ ಹಾಗೂ ದೇಶಭಕ್ತಿ ಭಾವನೆಯೊಂದಿಗೆ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಶಾಲಾ ಆವರಣದಲ್ಲಿ ಬೆಳಿಗ್ಗೆ ರಾಷ್ಟ್ರಧ್ವಜಾರೋಹಣ ನೆರವೇರಿಸಲಾಯಿತು. ರಾಷ್ಟ್ರಧ್ವಜವನ್ನು ಹಾರಿಸಿದ ಬಳಿಕ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ರಾಷ್ಟ್ರಗೀತೆಯನ್ನು ಹಾಡಿ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರಿಗೆ ಗೌರವ ಸಲ್ಲಿಸಿದರು. ದೇಶಭಕ್ತಿಯಸಂದೇಶ ಕಾರ್ಯಕ್ರಮದಲ್ಲಿ ಮಾತನಾಡಿದ ಗಣ್ಯರು, ಭಾರತದ ಸ್ವಾತಂತ್ರ್ಯಕ್ಕಾಗಿ ಮಹಾತ್ಮ ಗಾಂಧೀಜಿ, ಸುಭಾಷ್ ಚಂದ್ರ ಬೋಸ್, ಭಗತ್ ಸಿಂಗ್, ಸರ್ದಾರ್ ವಲ್ಲಭಭಾಯಿ ಪಟೇಲ್, ಜವಾಹರಲಾಲ್ ನೆಹರು ಸೇರಿದಂತೆ




ಅಸಂಖ್ಯಾತ ಸ್ವಾತಂತ್ರ್ಯ ಹೋರಾಟಗಾರರು ಮಾಡಿದ ತ್ಯಾಗ ಮತ್ತು ಬಲಿದಾನವನ್ನು ಸ್ಮರಿಸಿದರು. ಸ್ವಾತಂತ್ರ್ಯವೆಂದರೆ ಕೇವಲ ಬ್ರಿಟಿಷರ ಆಳ್ವಿಕೆಯಿಂದ ಮುಕ್ತಿ ಪಡೆದ ದಿನವಲ್ಲ; ದೇಶದ ಏಕತೆ, ಅಖಂಡತೆ, ಪ್ರಜಾಪ್ರಭುತ್ವ ಮತ್ತು ಸಂವಿಧಾನದ ಮೌಲ್ಯಗಳನ್ನು ಕಾಪಾಡುವ ಜವಾಬ್ದಾರಿಯೂ ಆಗಿದೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಲಾಯಿತು. ಇಂದಿನ ವಿದ್ಯಾರ್ಥಿಗಳೇ ನಾಳಿನ ದೇಶದ ಭವಿಷ್ಯವಾಗಿದ್ದು, ಅವರು ಉತ್ತಮ ಶಿಕ್ಷಣದ ಜೊತೆಗೆ ಶಿಸ್ತು, ಪ್ರಾಮಾಣಿಕತೆ, ಮಾನವೀಯತೆ, ಸಹಬಾಳ್ವೆ ಮತ್ತು ದೇಶಪ್ರೇಮದ ಗುಣಗಳನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಲಾಯಿತು.

ವಿದ್ಯಾರ್ಥಿಗಳಿಂದ ವಿವಿಧ ಕಾರ್ಯಕ್ರಮಗಳು ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಶಾಲೆಯ ವಿದ್ಯಾರ್ಥಿಗಳಿಂದ ದೇಶಭಕ್ತಿ ಗೀತೆಗಳು, ಭಾಷಣ, ಕವನ ವಾಚನ, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ದೇಶಭಕ್ತಿ ಸಾರುವ ವಿವಿಧ ಪ್ರದರ್ಶನಗಳು ನಡೆಯಿತು. ವಿದ್ಯಾರ್ಥಿಗಳು ತ್ರಿವರ್ಣ ಧ್ವಜದ ಬಣ್ಣಗಳ ಉಡುಪು ಧರಿಸಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದು, ಶಾಲಾ ಆವರಣದಲ್ಲಿ ದೇಶಭಕ್ತಿಯ ವಾತಾವರಣ ನಿರ್ಮಾಣವಾಗಿತ್ತು. ಶಿಕ್ಷಕರು ವಿದ್ಯಾರ್ಥಿಗಳಿಗೆ ಸ್ವಾತಂತ್ರ್ಯ ಹೋರಾಟದ ಇತಿಹಾಸ, ಸ್ವಾತಂತ್ರ್ಯದ ಮಹತ್ವ ಹಾಗೂ ಸಂವಿಧಾನದಲ್ಲಿ ನಾಗರಿಕರಿಗೆ ನೀಡಿರುವ ಹಕ್ಕು ಮತ್ತು ಕರ್ತವ್ಯಗಳ ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯ ಗುರುಗಳಾದ ಅಮರನಾಥ್ ಹಳ್ಳೂರ್ ಮಾತನಾಡಿ , "ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆ ನೀಡಬೇಕು. ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಸಮಾಜಕ್ಕೆ ಮತ್ತು ರಾಷ್ಟ್ರಕ್ಕೆ ಸೇವೆ ಸಲ್ಲಿಸುವ ಸಂಕಲ್ಪ ಮಾಡಬೇಕು" ಎಂದು ಹೇಳಿದರು. ಸ್ವಾತಂತ್ರ್ಯ ಹೋರಾಟಗಾರರ ತ್ಯಾಗವನ್ನು ಕೇವಲ ಆಗಸ್ಟ್ 15ರಂದು ಸ್ಮರಿಸುವುದಕ್ಕಿಂತ, ಅವರ ಆದರ್ಶಗಳನ್ನು ನಮ್ಮ ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳುವುದು ನಿಜವಾದ ಗೌರವವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರಾದ ಅಮರನಾಥ ಹಳ್ಳೂರ್ ಶಿಕ್ಷಕ-ಶಿಕ್ಷಕಿಯರು, ಸಿಬ್ಬಂದಿ, ವಿದ್ಯಾರ್ಥಿಗಳು, ಪೋಷಕರು, ಶಾಲಾ ಆಡಳಿತ ಮಂಡಳಿಯ ಸದಸ್ಯರು ಹಾಗೂ ಸ್ಥಳೀಯ ಗಣ್ಯರು ಉಪಸ್ಥಿತರಿದ್ದರು. ಕೊನೆಯಲ್ಲಿ ದೇಶದ ಏಕತೆ, ಶಾಂತಿ, ಸಮೃದ್ಧಿ ಹಾಗೂ ಅಭಿವೃದ್ಧಿಗಾಗಿ ಎಲ್ಲರೂ ಸಂಕಲ್ಪ ಮಾಡಿದರು. 80ನೇ ಸ್ವಾತಂತ್ರ್ಯ ದಿನಾಚರಣೆಯ ಕಾರ್ಯಕ್ರಮವು ದೇಶಭಕ್ತಿ ಮತ್ತು ಸಂಭ್ರಮದೊಂದಿಗೆ ಯಶಸ್ವಿಯಾಗಿ ನೆರವೇರಿತು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101